ವಿಶ್ವವಾಣಿ
ವಿಶ್ವಾಸವೇ ವಿಶ್ವ

ಮ್ಯಾಗ್ನಸ್‌ಗೆ ಮುಖಭಂಗ: ಪ್ರಜ್ಞಾನಂದಗೆ ಜಯ

ಭಾರತದ ಆರ್.ಪ್ರಜ್ಞಾನಂದ್ ಅವರು ಲಾಸ್ ವೇಗಾಸ್‌ನಲ್ಲಿ ನಡೆದ ಫ್ರೀಸ್ಟೈಲ್ ಚೆಸ್ ಗ್ರ್ಯಾಂಡ್ ಸ್ಲಾಮ್ ಟೂರ್ನಿಯಲ್ಲಿ ವಿಶ್ವದ ನಂಬರ್ 1 ಆಟಗಾರ ಮ್ಯಾಗ್ನಸ್ ಕಾರ್ಲ್‌ಸನ್ ಅವರ ವಿರುದ್ಧ ಭರ್ಜರಿ ಜಯ ಸಾಧಿಸಿದ್ದಾರೆ. 19 ವರ್ಷದ ಪ್ರಜ್ಞಾನಂದ್ ಕೇವಲ 39 ನಡೆಗಳಲ್ಲಿ ನಾರ್ವೆಯ ಚಾಂಪಿಯನ್ ಅನ್ನು ಸೋಲಿಸಿದ್ದಾರೆ. ಗುಕೇಶ್ ಅವರು ಕಾರ್ಲ್‌ಸನ್ ಅವರನ್ನು ಕ್ಲಾಸಿಕಲ್ ಮತ್ತು ರ್ಯಾಪಿಡ್ ಚೆಸ್‌ನಲ್ಲಿ ಸೋಲಿಸಿದ್ದರು. ಪ್ರಜ್ಞಾನಂದ ಅವರು ಈ ಗೆಲುವಿನೊಂದಿಗೆ ಎಲ್ಲ ಮಾದರಿಗಳಲ್ಲಿ ಕಾರ್ಲ್‌ಸನ್ ವಿರುದ್ಧ ಗೆಲುವು ಸಾಧಿಸಿದ ಸಾಧನೆ ಮಾಡಿದ್ದಾರೆ.

ಎನ್‌ಟಿಪಿಸಿ ಅಣುವಿದ್ಯುತ್ ಸ್ಥಾವರ ಪ್ರಸ್ತಾಪಕ್ಕೆ ಸಚಿವ ಸಂಪುಟ ಒಪ್ಪಿಗೆ

ಅಣು ವಿದ್ಯುತ್‌ನತ್ತ ಚಿತ್ತ

ಬೆಂಗಳೂರು: ರಾಜ್ಯದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪನೆಗೆ ಹಾಗೂ ಗುರುತಿಸಿರುವ ಸಂಭಾವ್ಯ ಸ್ಥಳಗಳಲ್ಲಿ ಪ್ರಾಥಮಿಕ ಅಧ್ಯಯನ ನಡೆಸಲು ರಾಜ್ಯ ಸರಕಾರ ಒಪ್ಪಿಗೆ ನೀಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಮಾಹಿತಿ ನೀಡಿದ ಕಾನೂನು ಸಚಿವ ಎಚ್.ಕೆ.ಪಾಟೀಲ್, ಕರ್ನಾಟಕದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪಿಸಲು ತಾತ್ವಿಕ ಅನುಮೋದನೆ ಹಾಗೂ ಗುರುತಿಸಿರುವ ಸಂಭಾವ್ಯ ಸ್ಥಳಗಳಲ್ಲಿ ಪ್ರಾಥಮಿಕ ಅಧ್ಯಯನ ನಡೆಸಲು ಎನ್‌ಟಿಪಿಸಿ ಸಂಸ್ಥೆಗೆ ಅನುಮತಿ ನೀಡಲಾಗಿದೆ ಎಂದರು. ಇದರಿಂದಾಗಿ ಕೊಪ್ಪಳ, ವಿಜಯಪುರ, ರಾಯಚೂರು ಮತ್ತು ಇತರ ಸ್ಥಳಗಳಲ್ಲಿ ರಾಷ್ಟ್ರೀಯ ಉಷ್ಣ ವಿದ್ಯುತ್ ನಿಗಮ (ಎನ್‌ಟಿಪಿಸಿ) ಪ್ರಾಥಮಿಕ ಅಧ್ಯಯನ ನಡೆಸಬಹುದಾಗಿದೆ.

ಪ್ರಸಕ್ತ ವರ್ಷದ ಕೇಂದ್ರ ಬಜೆಟ್‌ನಲ್ಲಿ ತಿಳಿಸಿರುವಂತೆ ಭಾರತದ ದೀರ್ಘಕಾಲೀನ ಇಂಧನ ಪರಿವರ್ತನಾ ಕಾರ್ಯತಂತ್ರದ ಭಾಗವಾಗಿ ಪರಮಾಣು ಶಕ್ತಿಗೆ ಹೆಚ್ಚಿನ ಒತ್ತು ನೀಡಲಾಗಿದ್ದು, ಕೇಂದ್ರ ಸರಕಾರ 2047 ರ ವೇಳೆಗೆ 100 ಗಿಗಾವ್ಯಾಟ್ ಪರಮಾಣು ವಿದ್ಯುತ್ ಸಾಮರ್ಥ್ಯದ ಗುರಿ ಹೊಂದಿದೆ. ಪಳೆಯುಳಿಕೆ ಇಂಧನಗಳ ಮೇಲಿನ ಹೊರೆ ಕಡಿಮೆ ಮಾಡುವ ಮೂಲಕ ದೇಶದಲ್ಲಿ ಪರಮಾಣು ಪ್ರಮುಖ ವಿದ್ಯುತ್ ಮೂಲವಾಗಬೇಕೆಂದು ಬಯಸಿರುವಂತೆ ರಾಜ್ಯ ಸರಕಾರ ತಾತ್ವಿಕ ಅನುಮೋದನೆ ನೀಡಿದೆ.

ನಾಗಮಂಗಲ ಶಾಖಾ ನಾಲೆ ಮರುವಿನ್ಯಾಸ ಕಾಮಗಾರಿಗೆ ಅನುಮೋದನೆ: ಸಚಿವ ಸಂಪುಟದಲ್ಲಿ ಹೇಮಾವತಿ ಯೋಜನಾ ವ್ಯಾಪ್ತಿಯಲ್ಲಿ ನಾಗಮಂಗಲ ಶಾಖಾ ನಾಲೆಯು ಸರಪಳಿ 0.00 ಕಿ.ಮೀ ಇಂದ 78.46 ಕಿ.ಮೀ ವರೆಗೆ 560 ಕೋಟಿ ರುಪಾಯಿ ಅಂದಾಜು ಮೊತ್ತದ ಮರುವಿನ್ಯಾಸ ಕಾಮಗಾರಿಗೆ ಸಚಿವ ಸಂಪುಟ ಅನುಮೋದನೆ ನೀಡಿದೆ. ನಾಗಮಂಗಲ ಶಾಖಾ ನಾಲೆಯು ಮೂಲ ಯೋಜನಾ ವರದಿಯಂತೆ 78.46 ಕಿ.ಮೀ ಉದ್ದವಿದ್ದು, ಈ ನಾಲೆಯನ್ನು 1994ರಲ್ಲಿ ಪ್ರಾರಂಭಿಸಿ 2004ರಲ್ಲಿ ಪೂರ್ಣಗೊಳಿಸಿ ನಾಲೆಯಲ್ಲಿ ನೀರನ್ನು ಹರಿಸಲಾಗುತ್ತಿದೆ. → 4

ಬಿ ಖಾತೆಗೂ ಮಾನ್ಯತೆ

ಬಿ ಖಾತಾ ಹೊಂದಿರುವ ಬೆಂಗಳೂರಿಗರಿಗೆ ಸರಕಾರ ಗುಡ್ ನ್ಯೂಸ್ ಕೊಟ್ಟಿದೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಯಲ್ಲಿ ಎ ಖಾತಾ, ಬಿ ಖಾತಾ ಗೊಂದಲಕ್ಕೆ ತೆರೆ ಎಳೆಯಲು ಸಂಪುಟ ಒಪ್ಪಿಗೆ ನೀಡಿದೆ. ಎ ಖಾತಾದಂತೆ ಬಿ ಖಾತಾಗೂ ಅಧಿಕೃತ ಮಾನ್ಯತೆ ನೀಡಲು ಸಂಪುಟ ತೀರ್ಮಾನಿಸಿದ್ದು, ಶೀಘ್ರದಲ್ಲೇ ರಾಜ್ಯ ಸರಕಾರದಿಂದ ಅಧಿಕೃತ ಅಧಿಸೂಚನೆ ಹೊರಬೀಳಲಿದೆ. 2020ರ ಮೇ 22ರಿಂದ ಅನ್ವಯ ಆಗಲಿದ್ದು, 2024 ಸೆ.30 ರವರೆಗೆ ಮಾತ್ರ ಹಾಲಿ ಇರುವ ಬಿ ಖಾತಾಗಳನ್ನು ಎಲ್ಲ ಕಾನೂನು ಉದ್ದೇಶಕ್ಕೆ ಅಧಿಕೃತ ಖಾತಾ ಎಂದು ಪರಿಗಣಿಸುವುದಾಗಿ ಸಂಪುಟ ತೀರ್ಮಾನಿಸಿದೆ.

ಇತರ ಪ್ರಮುಖ ನಿರ್ಧಾರಗಳು

- ಆಯುಷ್ ಇಲಾಖೆಯ ಆಯುರ್ವೇದ, ಸಿದ್ಧ ಮತ್ತು ಯುನಾನಿ ಔಷಧಗಳ ಅಮಲುಜಾರಿ ವಿಭಾಗ ಹಾಗೂ ಪರೀಕ್ಷಾ ಪ್ರಯೋಗಾಲಯವನ್ನು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆಯ ಜತೆಗೆ ವಿಲೀನ
- ರಾಯಚೂರು ಜಿಲ್ಲೆಯಲ್ಲಿ ಪಿಪಿಪಿ ಮಾದರಿಯಲ್ಲಿ ಜವಳಿ ಪಾರ್ಕ್ ಅಭಿವೃದ್ಧಿಗೆ 24.50 ಕೋಟಿ ರು.
- ಹಾವೇರಿ ಜಿಲ್ಲೆಯ ಹಾನಗಲ್ ತಾಲೂಕಿನ ಯಳವಟ್ಟಿ ಗ್ರಾಮದಲ್ಲಿ ಸಂಗ್ರಹಣೆ, ಸಂಸ್ಕರಣೆ, ಸಂರಕ್ಷಣಾ ಘಟಕ ಪಿಪಿಪಿ ಮಾದರಿಯಡಿ 35.07 ಕೋಟಿ ವೆಚ್ಚದಲ್ಲಿ ಆರಂಭ
- ಕೊಪ್ಪಳ ಜಿಲ್ಲೆಯ ಕನಕಗಿರಿ ತಾಲೂಕಿನ ಸಿರಿವಾರ ಗ್ರಾಮದಲ್ಲಿ ತೋಟಗಾರಿಕೆ ತಂತ್ರಜ್ಞಾನ ಪಾರ್ಕ್ ಆರಂಭಿಸಲು 83.79 ಕೋಟಿ ರು.
- ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ಕೆಮ್ಮಿಂಜೆ ಗ್ರಾಮದಲ್ಲಿ 3 ಎಕರೆ ಬಂಟರ ಸಂಘಕ್ಕೆ.
- ಗ್ರಾಪಂ ಮಟ್ಟದ 1,530 ಟೆಲಿಮೆಟ್ರಿಕ್ ಮಳೆ ಮಾಪನ ಕೇಂದ್ರಗಳ ಉಪಕರಣ ಬದಲಾಯಿಸಲು 19.89 ಕೋಟಿ
- ಮೈಸೂರು ವಿಶ್ವವಿದ್ಯಾಲಯದಲ್ಲಿ ಡಾ.ಬಿ.ಆರ್. ಅಂಬೇಡ್ಕರ ಸಂವಿಧಾನ ಪೀಠ ಸ್ಥಾಪನೆಗೆ 10 ಕೋಟಿ ರು.
- ಪ್ರವಾಸೋದ್ಯಮ ಉತ್ತೇಜಿಸಲು ಪ್ರವಾಸೋದ್ಯಮ ಮೂಲಸೌಲಭ್ಯ ನಿಗಮಕ್ಕೆ 166.22 ಕೋಟಿ ರು.
- ನವಿಲುತೀರ್ಥ ಅಣೆಕಟ್ಟಿನ ಡ್ರೈನೇಜ್ ಅಕ್ವಾಡಕ್ಟ್ ಎಂಎಸ್ ಪೈಪ್‌ನೊಂದಿಗೆ ನಿರ್ಮಿಸುವ ಕಾಮಗಾರಿಗೆ 19.05 ಕೋಟಿ ರು.
- ಕೇಂದ್ರಿಯ ಅಂತರ್ಜಲ ಪ್ರಾಧಿಕಾರ ಹೊರಡಿಸಿರುವ ಮಾರ್ಗಸೂಚಿ ಸೂಕ್ತ ಮಾರ್ಪಾಡುಗಳೊಂದಿಗೆ ಜಾರಿ
- ಚಿಕ್ಕಮಗಳೂರು ಜಿಲ್ಲೆಯ ನರಸಿಂಹರಾಜಪುರ ಪಟ್ಟಣದ ರಸ್ತೆ ಅಭಿವೃದ್ಧಿಗೆ 60 ಕೋಟಿ ರು.

ಕರಾವಳಿಯ ಶಾಲೆಗಳಿಗೆ ರಜೆ
ಗುಡ್ಡ ಕುಸಿದು ಹೆದ್ದಾರಿ ಸಂಚಾರ ವ್ಯತ್ಯಯ

ಮಳೆ ಅಬ್ಬರ

ಬೆಂಗಳೂರು: ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆ ಅಬ್ಬರ ಜೋರಾಗಿದ್ದು, ಹಲವೆಡೆ ಅನಾಹುತಗಳು ಸಂಭವಿಸಿವೆ.

ಹದಿನಾಲ್ಕು ಜಿಲ್ಲೆಗಳಲ್ಲಿ ಜುಲೈ 17 ರಿಂದ ಜುಲೈ 22ರ ವರೆಗೆ ಭಾರೀ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಉಡುಪಿ, ಉತ್ತರ ಕನ್ನಡ, ದಕ್ಷಿಣ ಕನ್ನಡ, ಚಿಕ್ಕಮಗಳೂರು, ಹಾಸನ, ಕೊಡಗು ಹಾಗೂ ಬೆಳಗಾವಿ ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಮೈಸೂರು, ಮಂಡ್ಯ ಶಿವಮೊಗ್ಗ ಚಿಕ್ಕಬಳ್ಳಾಪುರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ ಹಾಗೂ ಚಾಮರಾಜನಗರ ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಘೋಷಿಸಲಾಗಿದೆ. ಮುಂದಿನ ನಾಲ್ಕು ದಿನ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ.

ಶಾಲೆಗಳಿಗೆ ರಜೆ: ಮಳೆ ಅಬ್ಬರ ಮುಂದುವರಿದ ಪರಿಣಾಮ ಕೊಡಗು, ಉತ್ತರ ಕನ್ನಡದ ಜಿಲ್ಲೆಯ ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ ಹಾಗೂ ಭಟ್ಕಳ ತಾಲೂಕಿನ ಅಂಗನವಾಡಿ, ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ಗುರುವಾರ ರಜೆ ಘೋಷಿಸಲಾಗಿತ್ತು. → 4

ಮಗು ಬಲಿ

ಗಂಗಾವತಿ ತಾಲ್ಲೂಕಿನ ಹೆಬ್ಬಾಳ ಗ್ರಾಮದಲ್ಲಿ ಮನೆಯ ಶೀಟ್ ಮತ್ತು ಗೋಡೆ ಕುಸಿದು ಪ್ರಶಾಂತಿ ಎಂಬ ಒಂದೂವರೆ ವರ್ಷದ ಮಗು ಮೃತಪಟ್ಟಿದೆ. ಘಟನೆಯಲ್ಲಿ ಬಾಲಕಿಯ ತಾಯಿ ಹನುಮಂತಿ, ಕುಟುಂಬ ಸದಸ್ಯರಾದ ದುರ್ಗಮ್ಮ, ಭೀಮಮ್ಮ, ಹುಸೇನಪ್ಪ, ಫಕೀರಪ್ಪ ಎನ್ನುವವರಿಗೆ ಗಾಯಗಳಾಗಿದ್ದು, ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಕೊಡಲಾಗುತ್ತಿದೆ.

ಗುಡ್ಡ ಕುಸಿತದಿಂದ ಬಂದ್ ಆಗಿದ್ದ ಬೆಂಗಳೂರು-ಮಂಗಳೂರು ಹೆದ್ದಾರಿಯನ್ನು ಸಂಚಾರಕ್ಕೆ ಸುಗಮಗೊಳಿಸಲಾಯಿತು.

ಸೊಂಪಾದ ಪುಟಗಳು

ಮನೆಗೆ ಬಂದು ತಲುಪಿದೆನೆಂಬ ಸಾರ್ವತ್ರಿಕ ಭಾವ
ಶಿಶಿರಕಾಲ
ಶಿಶಿರ್ ಹೆಗಡೆ 6

ಮಳೆ ಕೋಗಿಲ ಹಕ್ಕಿಗೆ ಹಾಡಲು ಬರುವುದಿಲ್ಲ!
ಶಶಾಂಕಣ
ಶಶಿಧರ ಹಾಲಾಡಿ 7

ದಾರಿದೀಪೋಕ್ತಿ

ನಮ್ಮ ಆಪ್ತರಿಗೆ ಅಥವಾ ಸ್ನೇಹಿತರಿಗೆ ಮಾಡುವ ಒಳ್ಳೆಯ ಕೆಲಸಗಳನ್ನು ಅವರು ಗಮನಿಸದಿರಬಹುದು. ಆದರೆ ಅವರು ಗಮನಿಸುವುದು ನಾವು ಮಾಡದಿರುವುದನ್ನು ಮಾತ್ರ. ಹಾಗಂತ ನಾವು ಮಾಡುವ ಒಳ್ಳೆಯ ಕೆಲಸಗಳನ್ನು ಮುಂದುವರಿಸಬೇಕು, ಅವರು ನೋಡದಿದ್ದರೂ.

ವಕ್ರತುಂಡೋಕ್ತಿ



ಗಣಿತ ವಿಷಯದಲ್ಲಿ ಎಷ್ಟು ಸಲ ಫೇಲ್ ಆಗಿದ್ದೀರಿ ಎಂಬುದು ಗೊತ್ತಿಲ್ಲದಿದ್ದರೆ, ನೀವು ನಿಜಕ್ಕೂ ಫೇಲ್ ಆಗಿದ್ದೀರಿ ಎಂದರ್ಥ.

ಎಚ್‌ಡಿಕೆ ನ್ಯಾಯಾಂಗ ನಿಂದನೆ ಪ್ರಕರಣಕ್ಕೆ ತಡೆ

ದೆಹಲಿ: ಬಿಡದಿ ಬಳಿ ಕೇತಗಾನಹಳ್ಳಿಯಲ್ಲಿ ಒತ್ತುವರಿಗೆ ಸಂಬಂಧಿಸಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧದ ನ್ಯಾಯಾಂಗ ನಿಂದನೆ ಪ್ರಕರಣದ ವಿಚಾರಣೆಗೆ ಸುಪ್ರೀಂಕೋರ್ಟ್ ಗುರುವಾರ ತಡೆಯಾಜ್ಞೆ ನೀಡಿದೆ. ಕರ್ನಾಟಕ ಹೈಕೋರ್ಟ್ ಆದೇಶ ಪ್ರಶ್ನಿಸಿ ಕುಮಾರಸ್ವಾಮಿ ಅವರು ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು. ಅರ್ಜಿ ವಿಚಾರಣೆ ನಡೆಸಿದ ಪೀಠವು ಮುಂದಿನ ಆದೇಶದವರೆಗೂ ಪ್ರಕರಣದ ವಿಚಾರಣೆಗೆ ತಡೆ ನೀಡಿದೆ.

ಶಾಸಕ ನಂಜೇಗೌಡ ಆಸ್ತಿ ಮುಟ್ಟುಗೋಲು

ಬೆಂಗಳೂರು: 2023ರ ಕೋಲಾರ-ಚಿಕ್ಕಬಳ್ಳಾಪುರ ಜಿಲ್ಲೆಗಳ ಸಹಕಾರ ಹಾಲು ಉತ್ಪಾದಕರ ಒಕ್ಕೂಟ ನೇಮಕಾತಿ ಹಗರಣಕ್ಕೆ ಸಂಬಂಧಿಸಿ ಜಾರಿ ನಿರ್ದೇಶನಾಲಯ (ಇ.ಡಿ) ಅಧಿಕಾರಿಗಳು ಮಾಲೂರು ಶಾಸಕ ಕೆ.ವೈ. ನಂಜೇಗೌಡ ಹಾಗೂ ಇತರರಿಗೆ ಸೇರಿದ ಒಟ್ಟು 1.32 ಕೋಟಿ ರು.ಮೌಲ್ಯದ ಚರಾಸ್ತಿ ಹಾಗೂ ಸ್ಥಿರಾಸ್ತಿಗಳನ್ನು ತಾತ್ಕಾಲಿಕವಾಗಿ ಮುಟ್ಟುಗೋಲು ಹಾಕಿದ್ದಾರೆ. 2023ರಲ್ಲಿ ನಡೆದ ಕೋಮುಲ್ ನೇಮಕಾತಿ ಪ್ರಕ್ರಿಯೆಯಲ್ಲಿ ಹಲವು ಅವ್ಯವಹಾರ ನಡೆದಿರುವ ಶಂಕೆ ಇದೆ. ಈ ಹಗರಣದಲ್ಲಿ ಲಕ್ಷಾಂತರ ರುಪಾಯಿ ಹಸ್ತಾಂತರವಾಗಿದ್ದು, ಅರ್ಹತೆಯಿಲ್ಲದವರ ನೇಮಕಾತಿಗೆ ಹಣ ಪಡೆದುಕೊಳ್ಳಲಾಗಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿದ್ದವು.

ಕಾಲ್ತುಳಿತ ದುರಂತಕ್ಕೆ ಆರ್‌ಸಿಬಿ, ಡಿಎನ್‌ಎ, ಕೆಎಸ್‌ಸಿಎ ಕಾರಣ

ಕಾಲ್ತುಳಿತ ಪ್ರಕರಣ: ಪೊಲೀಸ್ ಅಧಿಕಾರಿಗಳ ಅಮಾನತು ವಾಪಸ್?

ಬೆಂಗಳೂರು: ಐಪಿಎಲ್ ಟೂರ್ನಿಯ ವಿಜಯೋತ್ಸವ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಜೂನ್ 4 ರಂದು 11 ಜನರ ಬಲಿ ತೆಗೆದುಕೊಂಡ ಕಾಲ್ತುಳಿತ ದುರಂತಕ್ಕೆ ಆರ್‌ಬಿ, ಡಿಎನ್‌ಎ ಮತ್ತು ಕೆಎಸ್‌ಸಿಎ ಕಾರಣವೆಂದು ರಾಜ್ಯ ಸರಕಾರದ ಗೃಹ ಇಲಾಖೆಯು ಹೈಕೋರ್ಟ್‌ಗೆ ವರದಿ ಸಲ್ಲಿಸಿದೆ. ಆದರೆ ಪೊಲೀಸ್ ಇಲಾಖೆ ವೈಫಲ್ಯದ ಬಗ್ಗೆ ಎಲ್ಲಿಯೂ ಪ್ರಸ್ತಾಪ ಮಾಡಿಲ್ಲವಾದ್ದರಿಂದ ಪೊಲೀಸ್ ಅಧಿಕಾರಿಗಳಿಗೆ ರಿಲೀಫ್ ನೀಡಿದಂತಾಗಿದೆ.

ವಿಜಯೋತ್ಸವ ಆಚರಣೆ ಕುರಿತಂತೆ ಆರ್‌ಸಿಬಿ, ಇವೆಂಟ್ ಮ್ಯಾನೇಜ್‌ಮೆಂಟ್ ಕಂಪನಿ ಡಿಎನ್‌ಎ ಮತ್ತು ಕೆಎಸ್‌ಸಿಎ ತೆಗೆದುಕೊಂಡ ಏಕಪಕ್ಷೀಯ ನಿರ್ಧಾರವೇ ಕಾಲ್ತುಳಿತ ದುರಂತಕ್ಕೆ ಕಾರಣವಾಗಿದೆ. ಪೊಲೀಸರ ಜತೆ ಸಮಾಲೋಚಿಸದೇ, ಸಂಭ್ರಮಾಚರಣೆ ಕಾರ್ಯಕ್ರಮ ನಡೆಸಲು ಪೊಲೀಸರ ಅನುಮತಿ ಪಡೆಯದೇ ತೆಗೆದುಕೊಂಡ ತೀರ್ಮಾನವು ಕಾಲ್ತುಳಿತ ಘಟನೆ ಸಂಭವಿಸಲು ಅವಕಾಶ ನೀಡಿದಂತಾಯಿತು ಎಂದು ವರದಿಯಲ್ಲಿ ಹೇಳಲಾಗಿದೆ. ಕಾಲ್ತುಳಿತ ದುರಂತ ಪ್ರಕರಣಕ್ಕೆ ಸಂಬಂಧಪಟ್ಟಂತೆ ಹೈಕೋರ್ಟ್ ಕೇಳಿರುವ 9 ಪ್ರಶ್ನೆಗಳಿಗೆ ವಿವರವಾದ ಉತ್ತರಗಳನ್ನು ವರದಿಯ ರೂಪದಲ್ಲಿ ನೀಡಿರುವ ಗೃಹ ಇಲಾಖೆ ಕಾರ್ಯದರ್ಶಿಯವರು ಆರ್‌ಸಿಬಿ ಪ್ರಮುಖ ಆಟಗಾರ ವಿರಾಟ್ ಕೊಹ್ಲಿ ಅವರು ಆರ್‌ಸಿಬಿ ವಿಜಯೋತ್ಸವ ಆಚರಿಸುವ ಬಗ್ಗೆ ಮಾತನಾಡಿದ ವಿಡಿಯೋವನ್ನು ಸಾಮಾಜಿಕ ಜಾಲತಾಣದಲ್ಲಿ ಆರ್‌ಸಿಬಿ ಪೋಸ್ಟ್ ಮಾಡಿದ್ದರ ಬಗ್ಗೆಯೂ ಪ್ರಸ್ತಾಪ ಮಾಡಿದ್ದಾರೆ. → 4

ವರದಿಯ ಪ್ರಮುಖ ಅಂಶಗಳು

- ಆರ್‌ಸಿಬಿ ಮತ್ತು ಇವೆಂಟ್ ಮ್ಯಾನೇಜ್‌ಮೆಂಟ್ ಕಂಪನಿ ಡಿಎನ್‌ಎ ಐಪಿಎಲ್ ಟೂರ್ನಿ ಗೆಲುವಿನ ಸಂಭ್ರಮಾಚರಣೆ ಬಗ್ಗೆ ಮಾಹಿತಿ ಇರುವ ಪತ್ರವನ್ನು ಮಾತ್ರ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆ ನೀಡಿದ್ದರು. ಆದರೆ ಸಂಭ್ರಮಾಚರಣೆಗೆ ಪೊಲೀಸ್ ಇಲಾಖೆ ಅನುಮತಿ ಕೇಳಿರಲಿಲ್ಲ.
- ಆರ್‌ಸಿಬಿ ಫೈನಲ್ ಪಂದ್ಯಕ್ಕೂ ಮೊದಲೇ ಪೊಲೀಸ್ ಠಾಣೆಗೆ ಸಂಘಟಕರು ಮಾಹಿತಿ ಪತ್ರ ನೀಡಿದ್ದರು. ಈ ಪತ್ರದಲ್ಲಿ ಆರ್‌ಸಿಬಿ ಫೈನಲ್ ಪಂದ್ಯ ಗೆಲುವಿನ ಬಗ್ಗೆ ಸ್ಪಷ್ಟ ಮಾಹಿತಿ ಇರಲಿಲ್ಲ ಮತ್ತು ಸಂಭ್ರಮಾಚರಣೆಗೆ ಸಂಬಂಧಪಟ್ಟಂತೆ ಮಾಹಿತಿಗಳ ಕೊರತೆ ಇದ್ದವು.
- ಆರ್‌ಸಿಬಿ ಫೈನಲ್ ಪಂದ್ಯ ಗೆದ್ದ ದಿನ ಜೂನ್ 3 ರ ರಾತ್ರಿ 11.30ರಿಂದ ಬೆಳಗಿನ ಜಾವ 5 ಗಂಟೆಯ ತನಕ ಬೆಂಗಳೂರು ಪೊಲೀಸ್ ಆಯುಕ್ತರು, ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಟ್ರಾಫಿಕ್ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರು.

ನ್ಯಾಟೊ ಮುಖ್ಯಸ್ಥರಿಗೆ ತಿರುಗೇಟು

ದೆಹಲಿ: ಭಾರತವು ರಷ್ಯಾದ ಜತೆ ವಾಣಿಜ್ಯ ಸಂಬಂಧವನ್ನು ಮುಂದುವರಿಸಿದರೆ, ಆರ್ಥಿಕ ನಿರ್ಬಂಧ ಹೇರಬೇಕಾದೀತು ಎಂದು ನ್ಯಾಟೊ ಪ್ರಧಾನ ಕಾರ್ಯದರ್ಶಿ ಮಾರ್ಕ್ ರುಟ್ಟೆ ಅವರು ಹೇಳಿರುವುದಕ್ಕೆ ತೀಕ್ಷ್ಣ ಪ್ರತಿಕ್ರಿಯೆ ನೀಡಿರುವ ಕೇಂದ್ರ ಸರಕಾರವು, 'ಇಬ್ಬಂದಿತನ ಹೊಂದಿರಬಾರದು' ಎಂದು ಎಚ್ಚರಿಸಿದೆ.

'ನಾವು ಈ ವಿಚಾರವಾಗಿ ಬಂದಿರುವ ವರದಿಗಳನ್ನು ಗಮನಿಸಿದ್ದೇವೆ. ಬೆಳವಣಿಗೆಗಳನ್ನು ಅವಲೋಕಿಸುತ್ತಿದ್ದೇವೆ. ನಮ್ಮ ದೇಶದವರ ಇಂಧನ ಅಗತ್ಯಗಳನ್ನು ಪೂರೈಸುವುದು ನಮ್ಮ ಪಾಲಿಗೆ ಹೆಚ್ಚಿನ ಆದ್ಯತೆಯ ಸಂಗತಿ' ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಹೇಳಿದ್ದಾರೆ. 'ಈ ಪ್ರಯತ್ನದಲ್ಲಿ ನಾವು ಮಾರುಕಟ್ಟೆಯಲ್ಲಿ ಲಭ್ಯವಿರುವುದರ ಆಧಾರದಲ್ಲಿ ಹಾಗೂ ಜಾಗತಿಕ ಸನ್ನಿವೇಶಗಳ ಆಧಾರದಲ್ಲಿ ಮುನ್ನಡೆಯುತ್ತೇವೆ. ಈ ವಿಚಾರದಲ್ಲಿ ಇಬ್ಬಂದಿತನ ಪ್ರದರ್ಶಿಸಬಾರದು ಎಂದು ಎಚ್ಚರಿಸುತ್ತೇವೆ' ಎಂದು ಹೇಳಿದ್ದಾರೆ.

'ರಷ್ಯಾದಿಂದ ತೈಲ ಖರೀದಿ ಮುಂದುವರಿಸಿದರೆ ಗಂಭೀರ ಆರ್ಥಿಕ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಭಾರತ, ಬ್ರೆಜಿಲ್ ಮತ್ತು ಚೀನಾ ರಾಷ್ಟ್ರಗಳಿಗೆ ನ್ಯಾಟೊ ಸೆಕ್ರೆಟರಿ ಜನರಲ್ ಮಾರ್ಕ್ ರುಟ್ಟೆ ಎಚ್ಚರಿಕೆ ನೀಡಿದ್ದರು.

ಟ್ರಂಪ್ ಪಾಕ್‌ಗೆ ಭೇಟಿ?

ಇಸ್ಲಾಮಾಬಾದ್: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸೆಪ್ಟೆಂಬರ್‌ನಲ್ಲಿ ಪಾಕಿಸ್ತಾನಕ್ಕೆ ಭೇಟಿ ನೀಡುವ ನಿರೀಕ್ಷೆಯಿದೆ ಎಂದು ವರದಿಯಾಗಿದೆ. ಟ್ರಂಪ್ ಭೇಟಿಯ ಬಗ್ಗೆ ತಿಳಿದಿಲ್ಲ ಎಂದು ಪಾಕಿಸ್ತಾನದ ವಿದೇಶಾಂಗ ಕಚೇರಿ ತಿಳಿಸಿದೆ.

ಪಾಕಿಸ್ತಾನಕ್ಕೆ ಟ್ರಂಪ್ ಭೇಟಿಯ ಕುರಿತು ಶ್ವೇತಭವನ ಯಾವುದೇ ಮಾಹಿತಿ ನೀಡಿಲ್ಲ. ಸೆಪ್ಟೆಂಬರ್‌ನಲ್ಲಿ ಇಸ್ಲಾಮಾಬಾದ್‌ಗೆ ಭೇಟಿ ನೀಡಲಿರುವ ಟ್ರಂಪ್, ಬಳಿಕ ಭಾರತಕ್ಕೂ ಭೇಟಿ ನೀಡಲಿದ್ದಾರೆ ಎಂದು ಅಲ್ಲಿನ ಸುದ್ದಿ ವಾಹಿನಿಗಳು ವರದಿ ಮಾಡಿವೆ. ಒಂದು ವೇಳೆ ಅವರ ಭೇಟಿ ಖಚಿತವಾದರೆ ಸುಮಾರು ಎರಡು ದಶಕಗಳ ನಂತರ ಅಮೆರಿಕದ ಅಧ್ಯಕ್ಷರೊಬ್ಬರು ಭೇಟಿ ನೀಡುತ್ತಿರುವುದು ಇದೇ ಮೊದಲು. 2006ರಲ್ಲಿ ಅಂದಿನ ಅಧ್ಯಕ್ಷ ಜಾರ್ಜ್ ಡಬ್ಲ್ಯು ಬುಷ್ ಪಾಕಿಸ್ತಾನಕ್ಕೆ ಭೇಟಿ ನೀಡಿದ್ದರು.

ಭರಮನಿಗೆ ಬಡ್ತಿ

ಬೆಳಗಾವಿ: ಸಿಎಂ ಸಿದ್ದರಾಮಯ್ಯ ಅವರು ಕೈ ಎತ್ತಿ ಅವಮಾನ ಮಾಡಿದ್ದಾರೆ ಎಂಬ ಕಾರಣಕ್ಕೆ ಸ್ವಯಂ ಸೇವಾ ನಿವೃತ್ತಿ ಬಯಸಿ ರಾಜೀನಾಮೆಗೆ ಮುಂದಾಗಿದ್ದ ಹುಬ್ಬಳ್ಳಿ-ಧಾರವಾಡ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಭರಮನಿ ಅವರಿಗೆ ಸರಕಾರ ಬಡ್ತಿ ನೀಡಿ, ಬೆಳಗಾವಿ ನಗರ ಕಾನೂನು ಸುವ್ಯವಸ್ಥೆ ಉಪ ಆಯುಕ್ತರನ್ನಾಗಿ ನೇಮಿಸಿ ಆದೇಶ ಹೊರಡಿಸಿದೆ. ರೋಹನ್ ಜಗದೀಶ್ ಅವರಿಂದ ತೆರವಾದ ಸ್ಥಾನಕ್ಕೆ ಗುರುವಾರ ನಾರಾಯಣ ಭರಮನಿ ಅಧಿಕಾರ ಸ್ವೀಕರಿಸಿದರು. ಈ ವೇಳೆ ಪ್ರತಿಕ್ರಿಯೆ ನೀಡಿದ ಅವರು, ಇಲಾಖೆ ನೀಡಿರುವ ಜವಾಬ್ದಾರಿಯನ್ನು ಸಮರ್ಪಕವಾಗಿ ಬಳಸಿಕೊಂಡು ನಗರದ ಕಾನೂನು ಸುವ್ಯವಸ್ಥೆ ಕಾಪಾಡುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಅಲಾಸ್ಕಾದಲ್ಲಿ ಭೂಕಂಪ

ಅಲಾಸ್ಕಾ: ಅಲಾಸ್ಕಾ ಕರಾವಳಿಯಲ್ಲಿ 7.3 ತೀವ್ರತೆಯ ಪ್ರಬಲ ಭೂಕಂಪ ಸಂಭವಿಸಿದ್ದು, ಇಲ್ಲಿನ ದಕ್ಷಿಣದ ಪ್ರದೇಶಗಳು ಮತ್ತು ಅಲಾಸ್ಕಾ ಪರ್ಯಾಯ ದ್ವೀಪದ ಕೆಲ ಭಾಗಗಳಿಗೆ ಸುನಾಮಿ ಎಚ್ಚರಿಕೆ ನೀಡಲಾಗಿದೆ ಎಂದು ಅಮೆರಿಕ ಭೂವೈಜ್ಞಾನಿಕ ಸಮೀಕ್ಷೆ ವರದಿ ಮಾಡಿದೆ. ಬುಧವಾರ ಸ್ಥಳೀಯ ಸಮಯ ಸುಮಾರು ಮಧ್ಯಾಹ್ನ 12:37ಕ್ಕೆ ಭೂಕಂಪ ಸಂಭವಿಸಿದ್ದು, ಇದರ ಕೇಂದ್ರ ಬಿಂದುವು ದ್ವೀಪ ಪಟ್ಟಣವಾದ ಸ್ಯಾಂಡ್ ಪಾಯಿಂಟ್‌ನ ದಕ್ಷಿಣಕ್ಕೆ ಸುಮಾರು 54 ಮೈಲುಗಳು (87 ಕಿಲೋ ಮೀಟರ್) ದೂರದಲ್ಲಿದೆ. ಭೂಕಂಪವು 20.1 ಕಿಲೋಮೀಟರ್ ಆಳದಲ್ಲಿ ಸಂಭವಿಸಿದ್ದು, ಮೇಲ್ಮೈ ಮಟ್ಟದಲ್ಲಿ ಪ್ರಭಾವದ ಸಾಧ್ಯತೆಯನ್ನು ಹೆಚ್ಚಿಸಿದೆ ಎಂದು ತಿಳಿಸಿದೆ.



50 ಮಂದಿ ಬೆಂಕಿಗಾಹುತಿ

ಬಾಗ್ದಾದ್: ಶಾಪಿಂಗ್ ಮಾಲ್‌ವೊಂದರಲ್ಲಿ ಸಂಭವಿಸಿದ ಬೆಂಕಿ ಅವಘಡದಲ್ಲಿ 50 ಮಂದಿ ಮೃತಪಟ್ಟಿರುವ ಘಟನೆ ಪೂರ್ವ ಇರಾಕ್‌ನ ಕುಟ್ ನಗರದಲ್ಲಿ ನಡೆದಿದೆ. ಈ ಕುರಿತು ಪ್ರತಿಕ್ರಿಯಿಸಿದ ವಾಸಿಟ್ ಪ್ರಾಂತ್ಯದ ಗವರ್ನರ್, ಮೃತರ ಸಂಖ್ಯೆ 50ಕ್ಕೆ ತಲುಪಿದ್ದು, ಹಲವರು ಗಾಯಗೊಂಡಿದ್ದಾರೆ. ಮಾಲ್‌ನಲ್ಲಿ ಬೆಂಕಿ ಅವಘಡ ಸಂಭವಿಸಲು ಕಾರಣವೇನು ಎಂಬ ಕುರಿತು ಅಧಿಕಾರಿಗಳು ತನಿಖೆ ಪ್ರಾರಂಭಿಸಿದ್ದಾರೆ ಎಂದು ತಿಳಿಸಿದ್ದಾರೆ. ಈ ದುರಂತದ ಬೆನ್ನಿಗೇ, ಈ ಪ್ರಾಂತ್ಯದಲ್ಲಿ ಮೂರು ದಿನಗಳ ಶೋಕಾಚರಣೆ ಘೋಷಿಸಲಾಗಿದ್ದು, ಸ್ಥಳೀಯ ಅಧಿಕಾರಿಗಳು, ಕಟ್ಟಡ ಮತ್ತು ಮಾಲ್ ಮಾಲಕರ ವಿರುದ್ಧ ಪ್ರಕರಣ ದಾಖಲಿಸಿಕೊಳ್ಳುವಂತೆ ಗವರ್ನರ್ ಸಂಬಂಧಿಸಿದ ಪ್ರಾಧಿಕಾರಗಳಿಗೆ ಸೂಚಿಸಿದ್ದಾರೆ.



ಕಾಲ್ತುಳಿತ ವರದಿ ಸ್ವೀಕಾರ

ಬೆಂಗಳೂರು: ಜೂನ್ 4 ರಂದು 11 ಆರ್‌ಸಿಬಿ ಅಭಿಮಾನಿಗಳ ಸಾವಿಗೆ ಕಾರಣವಾದ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ ಕಾಲ್ತುಳಿತ ದುರಂತದ ತನಿಖೆಗಾಗಿ ರಾಜ್ಯ ಸರಕಾರ ರಚಿಸಿದ್ದ ನ್ಯಾ.ಕುನ್ಹಾ ಅವರ ವರದಿಯನ್ನು ಸಂಪುಟ ಸ್ವೀಕರಿಸಿದೆ. ಮುಂದಿನ ಸಚಿವ ಸಂಪುಟದಲ್ಲಿ ನಾವು ಇದನ್ನು ಅಧ್ಯಯನ ಮಾಡಿ ಚರ್ಚಿಸುತ್ತೇವೆ ಮತ್ತು ನಂತರದ ನಿರ್ಧಾರಗಳನ್ನು ತಿಳಿಸುತ್ತೇವೆ. ವರದಿಯನ್ನು ಸಲ್ಲಿಸಬೇಕಾದಾಗ ಲ್ಲೆಲ್ಲಾ (ನ್ಯಾಯಾಲಯ)ಅದನ್ನು ಸಲ್ಲಿಸುತ್ತೇವೆ ಎಂದರು. ನಿವೃತ್ತ ಹೈಕೋರ್ಟ್ ನ್ಯಾಯಾಧೀಶ ಜಾನ್ ಮೈಕೆಲ್ ಕುನ್ಹಾ ನೇತೃತ್ವದ ಆಯೋಗ ಜುಲೈ 11 ರಂದು ಸಿಎಂ ಸಿದ್ದರಾಮಯ್ಯ ಅವರಿಗೆ ಎರಡು ಸಂಪುಟಗಳ ವರದಿ ಸಲ್ಲಿಸಿತ್ತು.

ಕಾಡಾನೆಗಳ ಉಪಟಳ ಎಐ ಸೈರನ್ ಅಳವಡಿಕೆ

ಮಡಿಕೇರಿ: ಕೊಡಗು ಜಿಲ್ಲೆಯಲ್ಲಿ ಆನೆ ಮಾನವನ ಸಂಘರ್ಷ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಆನೆಗಳ ಚಲನವಲನದ ಬಗ್ಗೆ ಎಚ್ಚರಿಕೆ ನೀಡಲು ಪ್ರಯೋಗಿಕವಾಗಿ ಎಐ ಆಧಾರಿತ ಸೈರನ್ ವ್ಯವಸ್ಥೆ ರೂಪಿಸಲಾಗಿದೆ. ಈ ಯೋಜನೆಗೆ ಖಾಸಗಿ ಕಂಪನಿಯೊಂದು ಹಣಕಾಸು ಒದಗಿಸಿದ್ದು, ಸ್ನೇಹ ಸಂಸ್ಥೆ ಎಂಬ ಎನ್‌ಜಿಒ ವತಿಯಿಂದ ಸೈರನ್ ವ್ಯವಸ್ಥೆ ಅಳವಡಿಸಲಾಗಿದೆ. ವಿರಾಜಪೇಟೆ ತಾಲೂಕಿನ ಮಾಲ್ದಾರೆ, ಬಡಗ, ಬನಂಗಾಲ ಮತ್ತು ಸುತ್ತಲಿನ ಪ್ರದೇಶಗಳ ಸಂಘರ್ಷ ವಲಯಗಳಲ್ಲಿ 12 ಅಂತಹ ಸೈರನ್‌ಗಳನ್ನು ಸ್ಥಾಪಿಸಲಾಗಿದೆ. ಈಗಾಗಲೇ ಈ ಗ್ರಾಮಗಳಲ್ಲಿ ಆನೆ ಕಂದಕ ಸೋಲಾರ್ ವಿದ್ಯುತ್ ತಂತಿಬೇಲಿ ಅಳವಡಿಕೆ ಮಾಡಿದರೂ ಕಾಡಾನೆಗಳ ಉಪಟಳ ಕಡಿಮೆ ಆಗಿರಲಿಲ್ಲ. ಇದರಿಂದ ಜನರು ಮನೆಯಿಂದ ಹೊರ ಬರಲು ಹಿಂದೇಟು ಹಾಕುತ್ತಿದ್ದರು. ಆದರೀಗ ಎಐ ಆಧಾರಿತ ಸೈರನ್ ಅಳವಡಿಕೆ ಮಾಡಿರುವುದರಿಂದ ಕಾಡಂಚಿನ ಜನರು ಓಡಾಟ ನಡೆಸುತ್ತಿದ್ದಾರೆ.



ಸೈರನ್ ಕೆಲಸ ಹೇಗೆ?

ಈ ಎಐ ಆಧಾರಿತ ವ್ಯವಸ್ಥೆಯ ಮೂಲಕ ಆನೆಯ ಚಲನೆಯನ್ನು ಪತ್ತೆಹಚ್ಚಲಾಗುತ್ತದೆ. ಆನೆಯಿದ್ದ ಸ್ಥಳವನ್ನಾಧರಿಸಿ, ಒಂದು ಕಿಮೀ ವ್ಯಾಪ್ತಿಯೊಳಗೆ ನಿವಾಸಿಗಳನ್ನು ಎಚ್ಚರಿಸಲು ಸೈರನ್ ಮೊಳಗುತ್ತದೆ.

ಕರ್ನಾಟಕ ಹೈಕೋರ್ಟ್ ವಿವೇಚನೆ ಬಳಸಿಲ್ಲ ಎಂದ ನ್ಯಾಯಮೂರ್ತಿ ಪರ್ದಿವಾಲಾ

ದರ್ಶನ್ ಜಾಮೀನಿಗೆ ಸುಪ್ರೀಂ ಆಕ್ಷೇಪ

ದೆಹಲಿ: ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜಾಮೀನು ಪಡೆದು ಶೂಟಿಂಗ್, ವಿದೇಶ ಪ್ರವಾಸ ಅಂತಾ ಜಾಲಿ ಮೂಡ್‌ನಲ್ಲಿದ್ದ ನಟ ದರ್ಶನ್‌ಗೆ ಸುಪ್ರೀಂಕೋರ್ಟ್ ಶಾಕ್ ಕೊಟ್ಟಿದೆ.

ಹೈಕೋರ್ಟ್ ತೀರ್ಪಿನ ಬಗ್ಗೆ ಪರಿಶೀಲಿಸಿರುವ ಸುಪ್ರೀಂ ಕೋರ್ಟ್ ಬದಲಾವಣೆಯ ಬಗ್ಗೆ ಪರೋಕ್ಷವಾಗಿ ತನ್ನ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದೆ. ಮಂಗಳವಾರ (ಜು.22) ಅಂತಿಮ ವಿಚಾರಣೆ ನಡೆಸಿ ಅಂದೇ ಆದೇಶ ನೀಡುವುದಾಗಿ ಸುಪ್ರೀಂಕೋರ್ಟ್ ಹೇಳಿದ್ದು, ಅಂದು ದರ್ಶನ, ಪವಿತ್ರಾಗೌಡ ಸೇರಿ ಏಳು ಮಂದಿಯ ಭವಿಷ್ಯ ನಿರ್ಧಾರವಾಗಲಿದೆ.

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲುವಾಸ ಅನುಭವಿಸಿ, ಜಾಮೀನು ಪಡೆದು ಸದ್ಯ ಶೂಟಿಂಗ್‌ಗಾಗಿ ವಿದೇಶಿ ಪ್ರವಾಸದಲ್ಲಿ ತಲ್ಲೀನರಾಗಿರುವ ನಟ ದರ್ಶನ್‌ಗೆ ಸುಪ್ರೀಂಕೋರ್ಟ್ ಶಾಕ್ ಕೊಡುವ ಸಾಧ್ಯತೆ ಇದೆ. ಹೈಕೋರ್ಟ್ ನೀಡಿರುವ ಜಾಮೀನು ಪ್ರಶ್ನಿಸಿ ಬೆಂಗಳೂರು ಪೊಲೀಸರು ಸಲ್ಲಿಕೆ ಮಾಡಿರುವ ಮೇಲ್ಮನವಿ ಅರ್ಜಿ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್‌ನ ನ್ಯಾ.ಪರ್ದಿವಾಲಾ ನೇತೃತ್ವದ ದ್ವಿಸದಸ್ಯ ಪೀಠ ಹೈಕೋರ್ಟ್ ಆದೇಶದ ಬಗ್ಗೆ ಭಿನ್ನಾಭಿಪ್ರಾಯಗಳನ್ನ ವ್ಯಕ್ತಪಡಿಸಿದೆ.

ಜಾಮೀನು ನೀಡುವಾಗ ಹೈಕೋರ್ಟ್ ತನ್ನ ವಿವೇಚನೆಯನ್ನು ಸೂಕ್ತವಾಗಿ ಬಳಸಿಲ್ಲ ಎಂದ ನ್ಯಾ. ಪರ್ದಿವಾಲಾ, ಈ ಬಗ್ಗೆ ಏನು ಹೇಳಬಯಸುತ್ತೀರಿ ಎಂದು ದರ್ಶನ್ ಪರ ಹಿರಿಯ ವಕೀಲ ಕಪಿಲ್ ಸಿಬಲ್‌ಗೆ ಪ್ರಶ್ನಿಸಿದರು. ಹೈಕೋರ್ಟ್ ಆದೇಶವನ್ನು ಹೇಗೆ ನೀಡಿದೆ ಎನ್ನುವುದನ್ನು ನೀವು ಗಮನಿಸಿರಬಹುದು ಎಂದು ಸಿಬಲ್ ಅವರಿಗೆ ಹೇಳಿದ ನ್ಯಾಯಾಲಯ ಕೇಳಿತು.

22ಕ್ಕೆ ಜಾಮೀನು ಭವಿಷ್ಯ ನಿರ್ಧಾರ

ಇದಕ್ಕೆ ಪ್ರತಿಯಾಗಿ ದರ್ಶನ ಪರ ಹಿರಿಯ ವಕೀಲ ಕಪಿಲ್ ಸಿಬಲ್ ವಾದ ಮಂಡಿಸಲು ಮುಂದಾಗಿದ್ದರು. ಈ ವೇಳೆ ಮಧ್ಯಪ್ರವೇಶ ಮಾಡಿದ ನ್ಯಾ.ಪರ್ದಿವಾಲಾ ಮಂಗಳವಾರ ಅಂತಿಮ ವಾದ ಮಂಡಿಸಿ, ಅಂದೇ ಈ ಬಗ್ಗೆ ತೀರ್ಪು ನೀಡಲಾಗುವುದು ಎಂದು ಹೇಳಿದರು. ಹೀಗಾಗಿ ಅಂದು ದರ್ಶನ್ ಜಾಮೀನು ಭವಿಷ್ಯ ನಿರ್ಧಾರವಾಗಲಿದೆ. ನಟ ದರ್ಶನ್ ಮಾತ್ರವಲ್ಲ, ಆಪ್ತೆ ಪವಿತ್ರಾ ಗೌಡ ಸೇರಿ ಇತರ ಐವರು ಆರೋಪಿಗಳ ಬೇಲಾ ಅಥವಾ ಜೈಲಾ ಎಂಬುದು ನಿರ್ಧಾರವಾಗಲಿದೆ. ದರ್ಶನ ಪರ ವಾದ ಆಲಿಸಿದ ಬಳಿಕ ಉಳಿದ ಆರೋಪಿಗಳ ಪರ ವಾದವನ್ನೂ ಕೋರ್ಟ್ ಆಲಿಸಲಿದೆ. ಇದಾದ ಬಳಿಕ ಕೋರ್ಟ್ ತನ್ನ ಅಂತಿಮ ಆದೇಶ ನೀಡಲಿದೆ.

ಫನ್‌ತರಂಗ

- ರಘುಪತಿ ಶೃಂಗೇರಿ -

ಸರ್ಕಾರಿ ಶಾಲಾ ಶಿಕ್ಷಕರಿಗೆ ಪಾಠ ಹೊರತಾಗಿ ಶಾಲಾ ಮಕ್ಕಳನ್ನು ಬೆಳಿಗ್ಗೆ ಬೇಗ ಎಬ್ಬಿಸಿ ಓದಿಸುವ ಟಾಸ್ಕ್
ಸುದ್ದಿ



ಸಮಾಚಾರ ಸಣ್ಣದಲ್ಲ

ಶೈಕ್ಷಣಿಕ ಗುಣಮಟ್ಟದ ಕ್ರಮಕ್ಕೆ ಆಗ್ರಹ

ಮೈಸೂರು: ರಾಜ್ಯದ ಶೈಕ್ಷಣಿಕ ಗುಣಮಟ್ಟದ ವೃದ್ಧಿಗಾಗಿ ಸೂಕ್ತ ಕ್ರಮ ಕೈಗೊಳ್ಳಲು ಕೋರಿ ಎಐಡಿಎಸ್‌ಒ ಮೈಸೂರು ಜಿಲ್ಲಾ ಸಮಿತಿ ವತಿಯಿಂದ ಡಿಡಿಪಿಐ ಎಸ್.ಟಿ.ಜವರೇಗೌಡ ಅವರಿಗೆ ಮನವಿ ಸಲ್ಲಿಸಲಾಯಿತು. ರಾಜ್ಯದಲ್ಲಿ ವರ್ಷದಿಂದ ವರ್ಷಕ್ಕೆ ಶಿಕ್ಷಣದ ಗುಣಮಟ್ಟ ಕುಸಿಯುತ್ತಿರುವುದು ಪಾಲಕರು, ಶಿಕ್ಷಕರು ಹಾಗೂ ರಾಜ್ಯದ ಶಿಕ್ಷಣ ಪ್ರೇಮಿ ಜನತೆಯಲ್ಲಿ ಆತಂಕವನ್ನುಂಟು ಮಾಡಿದೆ. ಗುಣಮಟ್ಟದ ಬೋಧನೆ, ಕಲಿಕೆಗೆ ಪೂರಕ ವಾತಾವರಣ ಮತ್ತು ವೈಜ್ಞಾನಿಕ ಮೌಲ್ಯಮಾಪನ ವ್ಯವಸ್ಥೆ ನಿರ್ಣಾಯಕ ಪಾತ್ರವನ್ನು ವಹಿಸುತ್ತವೆ ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಕಡ್ಡಾಯ ತೇರ್ಗಡೆ ನೀತಿ ಕೈ ಬಿಟ್ಟು 1ನೇ ತರಗತಿಯಿಂದಲೇ ಪಾಸ್ ಫೇಲ್ ಪದ್ದತಿ ಜಾರಿಗೊಳಿಸಬೇಕು. ಸರಕಾರಿ ಶಾಲೆಗಳಲ್ಲಿ ಖಾಲಿ ಇರುವ 70,000ದಷ್ಟು ಶಿಕ್ಷಕರ ಹುದ್ದೆಗಳ ನೇಮಕಾತಿ ಮಾಡಬೇಕು.ಶಾಲೆಗಳಿಗೆ ಸುಸಜ್ಜಿತ ಕಟ್ಟಡ, ಶೌಚಾಲಯ, ಕುಡಿಯುವ ನೀರು ಸೌಲಭ್ಯ ಒದಗಿಸಬೇಕು ಎಂದು ಒತ್ತಾಯಿಸಿದರು.

ಕೃಷಿ ಪಂಪ್ ಸೆಟ್‌ಗಳಿಗೆ ಸಹಾಯಧನ

ಮೈಸೂರು: ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ(ಸೆಸ್ಕ್) ವ್ಯಾಪ್ತಿಯಲ್ಲಿ ಗೃಹ ಜ್ಯೋತಿ ಯೋಜನೆ ಅಡಿಯಲ್ಲಿ ಅರ್ಹ ಗ್ರಾಹಕರ ವಿದ್ಯುತ್ ಸ್ಥಾವರಗಳಿಗೆ 1995.18 ಕೋಟಿ ರೂ. ಹಾಗೂ ಕೃಷಿ ನೀರಾವರಿ ಪಂಪ್ ಸೆಟ್ ವಿದ್ಯುತ್ ಸ್ಥಾವರಗಳಿಗೆ 6717.79 ಕೋಟಿ ರೂ.ಗಳ ಸಹಾಯ ಧನವನ್ನು ಬಿಡುಗಡೆ ಮಾಡಲಾಗಿದೆ. ಮೈಸೂರು, ಚಾಮರಾಜನಗರ, ಮಂಡ್ಯ, ಕೊಡಗು ಹಾಗೂ ಹಾಸನ ಜಿಲ್ಲೆಗಳ ವ್ಯಾಪ್ತಿಯಲ್ಲಿ 2317781 ಗ್ರಾಹಕರು ಗೃಹ ಜ್ಯೋತಿ ಯೋಜನೆಯಡಿ ಇದ್ದಾರೆ. 2023ರ ಆಗಸ್ಟ್‌ನಿಂದ 2025ರ ಜೂನ್‌ವರೆಗೆ 1995.18 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ.ಮುನಿಗೋಪಾಲ್ ರಾಜು ತಿಳಿಸಿದ್ದಾರೆ.

ಅಭಿನಂದನಾ ಗ್ರಂಥ ಬಿಡುಗಡೆ ಜು.20ಕ್ಕೆ

ಮಂಡ್ಯ: ಪಿಇಎಸ್ ವಿಜ್ಞಾನ ಕಾಲೇಜಿನ ನಿವೃತ್ತ ಪ್ರಾಂಶುಪಾಲ ಡಾ.ಡಿ.ಶ್ರೀನಿವಾಸ್-85 ಸ್ನೇಹಶೀಲ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭವನ್ನು ಜುಲೈ 20ರ ಬೆಳಿಗ್ಗೆ 11 ಗಂಟೆಗೆ ನಗರದ ಸ್ವಾಮಿ ವಿವೇಕಾನಂದ ರಂಗಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ಕರ್ನಾಟಕ ಸಂಘದ ಅಧ್ಯಕ್ಷ ಡಾ.ಜಯಪ್ರಕಾಶ್ ಗೌಡ ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಾ.ಡಿ.ಶ್ರೀನಿವಾಸ್ ಅವರಿಗೆ 85 ವರ್ಷಗಳು ತುಂಬಲಿದ್ದು, ಜಿಲ್ಲೆಗೆ ಪ್ರಥಮ ಡಾಕ್ಟರೇಟ್ ಪದವಿ ಪಡೆದವರಾಗಿದ್ದಾರೆ ಎಂದರು. ಮಾಜಿ ಉಪಮುಖ್ಯಮಂತ್ರಿ, ಶಾಸಕ ಡಾ.ಸಿ.ಎನ್.ಅಶ್ವತ್ಥ್‌ನಾರಾಯಣ ಅಭಿನಂದಿಸಲಿದ್ದು, ಮಾಜಿ ಶಾಸಕ ಎಂ.ಶ್ರೀನಿವಾಸ್ ಅಧ್ಯಕ್ಷತೆ ವಹಿಸುವರು, ಮೈಸೂರು ನಿವೃತ್ತ ಕುಲಪತಿ ಡಾ.ಕೆ.ಎಸ್.ರಂಗಪ್ಪ ಗ್ರಂಥ ಬಿಡುಗಡೆ ಮಾಡುವರು, ಕರ್ನಾಟಕ ಸಂಘದ ಅಧ್ಯಕ್ಷ ಡಾ.ಜಯಪ್ರಕಾಶ್‌ಗೌಡ ಅಭಿನಂದನಾ ನುಡಿಗಳನ್ನಾಡಲಿದ್ದು, ಜಾನಪದ ಪರಿಷತ್ ಮಾಜಿ ಅಧ್ಯಕ್ಷ ಟಿ.ತಿಮ್ಮೇಗೌಡ, ವಿಧಾನ ಪರಿಷತ್ ಮಾಜಿ ಸದಸ್ಯ ಕೆ.ಟಿ.ಶ್ರೀಕಂಠೇಗೌಡ, ಉಪಸ್ಥಿತರಿರಲಿದ್ದಾರೆ ಎಂದರು.

ಎಂಎಲ್‌ಸಿ ಸ್ಥಾನ ನೀಡಲು ಒತ್ತಾಯ

ಮಂಡ್ಯ: ಪೌರ ಕಾರ್ಮಿಕರ ಶ್ರೆಯೋಭಿವೃದ್ಧಿಗೆ 45 ವರ್ಷಗಳಿಂದ ಶ್ರಮಿಸುತ್ತಿರುವ ಮೈಸೂರಿನ ಮಾಜಿ ಮೇಯರ್ ನಾರಾಯಣ ಅವರಿಗೆ ಕಾಂಗ್ರೆಸ್ ಪಕ್ಷದಿಂದ ವಿಧಾನಪರಿಷತ್ ಸದಸ್ಯತ್ವಸ್ಥಾನ ನೀಡಬೇಕು ಎಂದು ಪೌರಕಾರ್ಮಿಕರ ಮಹಾಸಭಾದ ರಾಜ್ಯ ಕಾರ್ಯದರ್ಶಿ ಮದ್ದೂರು ಶ್ರೀನಿವಾಸ್ ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಳೆದ 40 ವರ್ಷಗಳಿಂದ ಪೌರಕಾರ್ಮಿಕರ ಏಳಿಗೆಗಾಗಿ ದುಡಿಯುತ್ತಿರುವ ನಾರಾಯಣಗೆ ಕಾಂಗ್ರೆಸ್ ಪಕ್ಷ ವಿಧಾನಪರಿಷತ್ ಸದಸ್ಯತ್ವಸ್ಥಾನ ಒದಗಿಸಿ ಕೊಡಬೇಕೆಂದು ಆಗ್ರಹಿಸಿದರು. ಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಕೆ.ಗಣೇಶ್, ಜಿಲ್ಲಾ ಕಾರ್ಯದರ್ಶಿ ಎಂ.ಮಹದೇವ, ಅಧ್ಯಕ್ಷ ರಂಗಸ್ವಾಮಿ, ಎಂ.ಗಣೇಶ್ ಇದ್ದರು.

IN THE COURT OF THE HONBLE PRL. CIVIL JUDGE AND J.M.F.C. AT TUMAKURU
C.Mis. No 244/2025
Petitioners: 1. Sunandamma W/o Late. Govindaraju Aged about 46 years. 2. Jamuna G D/o Late. Govindaraju, W/oManu, Aged about 29 years. 3. Girish B.G. S/o Late. Govindaraju, Aged about 27 years. 4. Shivakumar G. S/o Late. Govindaraju, Aged about 19 years. All are R/at, Behind Shishuvihara, Agrahara, Tumakuru To wn, Tumakuru.
V/S
Respondent: The Deputy Tahasildar, Urdigere Nadkacheri, Urdigere Hobli, Tumakuru Taluk.
PAPER PUBLICATION
Whereas the above petitioners are filed the above petition for issue directions for respondent to issue death certificate Husband of the 1st petitioner and father of the petitioner No.2 to 4 by name GOVINDARAJU S/O LATE. GANGANNA who died on 09-09-2012 and now the matter is set down for issue of court notice sitnmmons to all the interested persons or legal heirs whoever got any objections over the above said death certificate may appear in this case either as respondent petitioner and may prosecute the same the date of hearing 21-08-2025, called upon to appear before the above court at 11 A.M. either in person or through Advocate If you fail to appear before this court, the matter will be heard and decided exparte.
Given under my hand and the seal of this Hon'ble Court, this the 17 Day of July 2025.
By order of the court
PRL. CIVIL JUDGE AND J.M.F.C. AT TUMAKURU.
Advocate for petitioner
Shekhar T, Advocate, Sneha Law Associates, PLD Bank Building, Beside Court Complex, Tumakuru.

ಇಂದು ಶಾಲಾ ಕಾಲೇಜುಗಳಿಗೆ ರಜೆ | ಮಡಿಕೇರಿಗೆ ದಾಖಲೆಯ 105 ಇಂಚು ಮಳೆ

ಭಾರೀ ಮಳೆ, ರೆಡ್ ಅಲರ್ಟ್

ಮಡಿಕೇರಿ: ಕೊಡಗು ಜಿಲ್ಲೆಯಲ್ಲಿ ಗಾಳಿಮಳೆ ಹೆಚ್ಚಾಗುವ ಸಾಧ್ಯತೆಗಳಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ರೆಡ್ ಅಲರ್ಟ್ ಘೋಷಿಸಿದ್ದು ಜು.18 ರಂದು ಅಂಗನವಾಡಿ, ಪ್ರಾಥಮಿಕ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಿ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರು ಆದೇಶಿಸಿದ್ದಾರೆ.

ಪ್ರಸ್ತುತ ವರ್ಷ ಜನವರಿಯಿಂದ ಇಲ್ಲಿಯವರೆಗೆ ಮಡಿಕೇರಿ ತಾಲೂಕಿನಲ್ಲಿ ದಾಖಲೆಯ 105 ಇಂಚು ಮಳೆಯಾಗಿದೆ. ಕಳೆದ 24 ಗಂಟೆಗಳಲ್ಲಿ 95.70 ಮಿ.ಮೀ ಮಳೆ ಸುರಿದಿದ್ದು, ಜಿಲ್ಲೆಯಲ್ಲಿ ಕಳೆದ 24 ಗಂಟೆ ಅವಧಿಯಲ್ಲಿ ಸರಾಸರಿ 36.69 ಮಿ.ಮೀ. ಮಳೆಯಾಗಿದೆ. ಜನವರಿಯಿಂದ ಇಲ್ಲಿಯವರೆಗಿನ ಮಳೆ 1764.46 ಮಿ.ಮೀ, ಕಳೆದ ವರ್ಷ ಇದೇ ಅವಧಿಯಲ್ಲಿ 1347.79 ಮಿ.ಮೀ ಮಳೆಯಾಗಿತ್ತು. ಮುಂದಿನ ದಿನಗಳಲ್ಲಿ ಮಳೆಯ ಪ್ರಮಾಣ ಹೆಚ್ಚಾಗುವುದರಿಂದ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಡಳಿತ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಸೂಚನೆ ನೀಡಿದೆ.

ಜಿಲ್ಲೆಯ ಮಳೆ ವಿವರ : ಇಂದಿನ ಸರಾಸರಿ ಮಳೆ 32.75 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 55.60 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 1637.15 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 1333.15 ಮಿ.ಮೀ. ಮಳೆಯಾಗಿತ್ತು.

ಪೊನ್ನಂಪೇಟೆ : ಇಂದಿನ ಸರಾಸರಿ ಮಳೆ 33.79 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 90.05 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 1700.57 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 1289.08 ಮಿ.ಮೀ. ಮಳೆಯಾಗಿತ್ತು.

ಸೋಮವಾರಪೇಟೆ: ಇಂದಿನ ಸರಾಸರಿ ಮಳೆ 9.75 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 110.05 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 1938.87 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 1265.61 ಮಿ.ಮೀ. ಮಳೆಯಾಗಿತ್ತು.

ಕುಶಾಲನಗರ: ಇಂದಿನ ಸರಾಸರಿ ಮಳೆ 11.45 ಮಿ.ಮೀ. ಮಳೆಯಾಗಿದೆ. ಕಳೆದ ವರ್ಷ ಇದೇ ದಿನ 39.90 ಮಿ.ಮೀ. ಜನವರಿಯಿಂದ ಇಲ್ಲಿಯವರೆಗಿನ ಮಳೆ 903.79 ಮಿ.ಮೀ. ಕಳೆದ ವರ್ಷ ಇದೇ ಅವಧಿಯಲ್ಲಿ 907.10 ಮಿ.ಮೀ. ಮಳೆಯಾಗಿತ್ತು.

ಹೋಬಳಿವಾರು ಮಳೆ : ಮಡಿಕೇರಿ ಕಸಬಾ 63, ನಾಪೋಕ್ಲು 59.60, ಸಂಪಾಜೆ 147, ಭಾಗಮಂಡಲ 113.20, ವಿರಾಜಪೇಟೆ 35, ಅಮ್ಮತ್ತಿ 30.50, ಹುದಿಕೇರಿ 38.10, ಶ್ರೀಮಂಗಲ 48, ಪೊನ್ನಂಪೇಟೆ 32, ಬಾಳೆಲೆ 17.08, ಸೋಮವಾರಪೇಟೆ 9.20, ಶನಿವಾರಸಂತೆ 05, ಶಾಂತಳ್ಳಿ 21, ಕೊಡ್ಲಿಪೇಟೆ 3.80, ಕುಶಾಲನಗರ 4.70, ಸುಂಟಿಕೊಪ್ಪ 18.20 ಮಿ.ಮೀ.ಮಳೆಯಾಗಿದೆ.

ಹಾರಂಗಿ ಜಲಾಶಯದ ಮಟ್ಟ : ಹಾರಂಗಿ ಜಲಾಶಯದ ಗರಿಷ್ಠ ಮಟ್ಟ 2,859 ಅಡಿಗಳು, ಇಂದಿನ ನೀರಿನ ಮಟ್ಟ 2856.79 ಅಡಿಗಳು. ಕಳೆದ ವರ್ಷ ಇದೇ ದಿನ 2852.56 ಅಡಿಗಳು. ಹಾರಂಗಿಯಲ್ಲಿ ಬಿದ್ದ ಮಳೆ 5.80 ಮಿ.ಮೀ., ಕಳೆದ ವರ್ಷ ಇದೇ ದಿನ 21.60 ಮಿ.ಮೀ., ಇಂದಿನ ನೀರಿನ ಒಳಹರಿವು 7381 ಕ್ಯುಸೆಕ್, ಕಳೆದ ವರ್ಷ ಇದೇ ದಿನ 9257 ಕ್ಯುಸೆಕ್., ಇಂದಿನ ನೀರಿನ ಹೊರ ಹರಿವು ನದಿಗೆ 3166 ಕ್ಯುಸೆಕ್. ಕಳೆದ ವರ್ಷ ಇದೇ ದಿನ ನೀರಿನ ಹೊರ ಹರಿವು ನದಿಗೆ 10000 ಕ್ಯುಸೆಕ್.

ಮಡಿಕೇರಿಯಲ್ಲಿ ಗುರುವಾರ ನಿರಂತರ ಮಳೆ ಸುರಿಯುತು.

ದಿನಗೂಲಿ ನೌಕರರಿಗೆ ನೂತನ ಕ್ವಾಟ್ರಸ್ ಶೀಘ್ರ

ಮಡಿಕೇರಿ: ವಿರಾಜಪೇಟೆ ಪುರಸಭಾ ವ್ಯಾಪ್ತಿಯ ಸುಣ್ಣದಬೀದಿ ವಾರ್ಡಿಗೆ ಮುಖ್ಯಮಂತ್ರಿಗಳ ಕಾನೂನು ಸಲಹೆಗಾರರು ಹಾಗೂ ವಿರಾಜಪೇಟೆ ಕ್ಷೇತ್ರದ ಶಾಸಕ ಎ. ಎಸ್.ಪೊನ್ನಣ್ಣ ಭೇಟಿ ನೀಡಿ, ಸ್ಥಳೀಯ ಸಮಸ್ಯೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಸುಣ್ಣದಬೀದಿ ವಾರ್ಡ್‌ನಲ್ಲಿರುವ ಸೇತುವೆಯ ಬದಿಯಲ್ಲಿ ಕುಸಿತ ಸಂಭವಿಸುವ ಸಾಧ್ಯತೆ ಇದ್ದು, ಇದಕ್ಕೆ ತಡೆಗೋಡೆ ನಿರ್ಮಿಸುವ ಕುರಿತು ಪರಿಶೀಲಿಸಿದರು. ಅಲ್ಲದೇ ಅನುದಾನ ಒದಗಿಸುವುದಾಗಿ ಭರವಸೆ ನೀಡಿದರು.

ನಂತರ ವಾರ್ಡ್ ಸದಸ್ಯರು ಹಾಗೂ ಸ್ಥಳೀಯರೊಂದಿಗೆ ಮಾತನಾಡಿದ ಶಾಸಕರು, ವಾರ್ಡ್ ವ್ಯಾಪ್ತಿಯಲ್ಲಿ ಸ್ವಚ್ಛತೆಯನ್ನು ಕಾಪಾಡಿಕೊಳ್ಳುವಂತೆ ಸಲಹೆ ನೀಡಿದರು. ಪುರಸಭೆಯ ದಿನಗೂಲಿ ನೌಕರರಿಗೆ ಈ ಭಾಗದಲ್ಲಿ ನೂತನವಾಗಿ ಕ್ವಾಟ್ರಸ್ ನಿರ್ಮಿಸುವ ಬಗ್ಗೆ ಪ್ರಗತಿಯಲ್ಲಿರುವುದಾಗಿ ಮಾಹಿತಿ ನೀಡಿದರು. ಜನರ ಅಹವಾಲುಗಳನ್ನು ಆಲಿಸಿ ಅಗತ್ಯ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಅಲ್ಲದೇ ಇತ್ತೀಚೆಗೆ ಅಗ್ನಿ ಅವಘಡ ಸಂಭವಿಸಿರುವ ಲೋಕೋಪಯೋಗಿ ಕಟ್ಟಡಕ್ಕೆ ತೆರಳಿ ಪರಿಶೀಲಿಸಿದರು.

ವಿರಾಜಪೇಟೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪಟ್ಟಡ ರಂಜಿ ಪೂಣಚ್ಚ, ಪುರಸಭೆ ಅಧ್ಯಕ್ಷೆ ದೇಚಮ್ಮ ಕಾಳಪ್ಪ, ಉಪಾಧ್ಯಕ್ಷರಾದ ಫಸಿಯಾ ತಬ್ಸುಂ, ಸ್ಥಳೀಯ ವಾರ್ಡ್ ಸದಸ್ಯ ಹಾಗೂ ಸ್ಥಾಯಿ ಸಮಿತಿ ಅಧ್ಯಕ್ಷ ಜಲೀಲ್, ಪುರಾಸಭೆಯ ಮುಖ್ಯಾಧಿಕಾರಿ ನಾಚಪ್ಪ, ಪುರಸಭೆ ಸದಸ್ಯರುಗಳಾದ ಮತೀನ್, ಶಾಹುಲ್ ಹಮಿದ್, ಪೃಥ್ವಿನಾಥ್, ಅತಿಫ್ ಮನ್ನ, ಯುವ ಕಾಂಗ್ರೆಸ್ ಪ್ರಮುಖರಾದ ಶಬೀರ್, ಪಕ್ಷದ ಪ್ರಮುಖರಾದ ಜೋಕಿಮ್, ಹರೀಶ್, ಮಂಜು ದೇವಯ್ಯ, ಮಂಜುನಾಥ್, ಅಯೂಬ್ ಹಾಗೂ ಪ್ರಮುಖರು, ಸ್ಥಳೀಯರು ಇದ್ದರು.

ಸಾಂತ್ವನ: ಇತ್ತೀಚೆಗೆ ನಿಧನರಾದ ಪುರಸಭೆ ಸದಸ್ಯೆ ಆಶಾ ಸುಬ್ಬಯ್ಯ ಅವರ ಮನೆಗೆ ಶಾಸಕರು ಭೇಟಿ ನೀಡಿ, ಮೃತರ ಕುಟುಂಬಸ್ಥರಿಗೆ ಸಾಂತ್ವನ ಹೇಳಿದರು.

ವಿರಾಜಪೇಟೆ ಸುಣ್ಣದಬೀದಿ ವಾರ್ಡಿಗೆ ಶಾಸಕ ಎ.ಎಸ್ .ಪೊನ್ನಣ್ಣ ಭೇಟಿ ನೀಡಿ, ಸ್ಥಳೀಯ ಸಮಸ್ಯೆಗಳ ಬಗ್ಗೆ ಪರಿಶೀಲನೆ ನಡೆಸಿದರು.

ಭಾರತೀನಗರ-ಮದ್ದೂರು ಸುತ್ತಮುತ್ತ ಸತತ ಮಳೆ

ಮದ್ದೂರು ತಾಲೂಕಿನ ಭಾರತೀ ನಗರ-ಮದ್ದೂರು ಮಾರ್ಗದ ರಸ್ತೆಯ ಲ್ಲಿ ನೀರು ಹರಿಯುತ್ತಿರುವುದು.

ಮದ್ದೂರು: ತಾಲೂಕು ಸೇರಿದಂತೆ ಪಟ್ಟಣ ವ್ಯಾಪ್ತಿಯಲ್ಲಿ ಬುಧವಾರ ಬಿದ್ದ ಭಾರೀ ಮಳೆ ಸುರಿದು ವಾಹನ ಸಂಚಾರಕ್ಕೂ ಅಡಚಣೆ ಉಂಟಾಯಿತು.

ತಾಲೂಕಿನ ಕೊಪ್ಪ, ಬೆಸಗರಹಳ್ಳಿ, ಕೆಸ್ತೂರು, ಕೆ.ಹೊನ್ನಲಗೆರೆ ಹಾಗೂ ಭಾರತೀ ನಗರ ವ್ಯಾಪ್ತಿಯಲ್ಲಿ ಭಾರಿ ಮಳೆ ಸುರಿದ ಪರಿಣಾಮವಾಗಿ ಜನಜೀವನ ಅಸ್ತವ್ಯಸ್ಥಗೊಂಡು ಪ್ರಯಾಣಿಕರು, ವ್ಯಾಪಾರಸ್ಥರು, ವರ್ತಕರು ಪರದಾಡುವಂತಾಯಿತು. ಕೊಪ್ಪ ಮತ್ತು ಬೆಸಗರಹಳ್ಳಿ ಗ್ರಾಮದಲ್ಲಿ ಮಳೆ ಸುರಿದ ಪರಿಣಾಮವಾಗಿ ರಸ್ತೆಯಲ್ಲಿ ಮಳೆ ನೀರು ಹರಿಯಿತ್ತಲ್ಲದೆ ಶಾಲಾ ಕಾಲೇಜಿನಿಂದ ಮನೆಯತ್ತ ಮುಖಮಾಡಿದ ವಿದ್ಯಾರ್ಥಿಗಳು ಮಳೆಯ ನಡುವೆಯೇ ಗ್ರಾಮದತ್ತ ಮುಖ ಮಾಡಿದರು.

ಪಟ್ಟಣದ ಎಚ್.ಕೆ.ವಿ ನಗರದ ಹೊರವಲಯದ ರಸ್ತೆಯಲ್ಲಿ ನೀರು ತುಂಬಿಕೊಂಡು ದ್ವಿಚಕ್ರ ವಾಹನ ಸವಾರರು, ಸಾರ್ವಜನಿಕರು ಸಂಚರಿಸಲು ಪರದಾಡುವಂತಾಯಿತ್ತಲ್ಲದೆ ಮೈಸೂರು-ಬೆಂಗಳೂರು ಹೆದ್ದಾರಿಯ ಐಶ್ವರ್ಯ ವಿದ್ಯಾಸಂಸ್ಥೆಯ ಬಳಿ ವಿ.ಸಿ. ನಾಲೆಯಲ್ಲಿ ನೀರು ತುಂಬಿಕೊಂಡು ರಸ್ತೆಯಲ್ಲಿ ಹರಿಯುತ್ತಿದ್ದ ದೃಶ್ಯ ಕಂಡುಬಂತು. ಭಾರತೀ ನಗರದಲ್ಲೂ ಕೂಡ ವಾಹನ ಸಂಚಾರ ಪ್ರಯಾಣಿಕರು ಪರದಾಡುವಂತಾಯಿತು.

ಮಾದಿಗರು ಹೆಚ್ಚು ಬೆಂಬಲಿಸಬೇಕು

ಮೈಸೂರು: ಒಳಮೀಸಲಾತಿ ಪರವಾಗಿರುವ ಸಿಎಂ ಸಿದ್ದರಾಮಯ್ಯ ಅವರನ್ನು ನಾವು ಬೆಂಬಲಿಸಿ ಶಕ್ತಿ ತುಂಬಬೇಕಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ಹೇಳಿದರು.

ನಗರದ ಜಲದರ್ಶಿನಿ ಅತಿಥಿಗೃಹ ಸಭಾಂಗಣ ದಲ್ಲಿ ಗುರುವಾರ ನಡೆದ ಮೈಸೂರು ಮತ್ತು ಚಾಮ ರಾಜನಗರ ಜಿಲ್ಲೆಗಳ ಮಾದಿಗ ಸಮುದಾಯದ ಮುಖಂಡರ ಸಭೆಯಲ್ಲಿ ವಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರ ಜಾರಿಗೆ ತಂದಿರುವ ಗ್ಯಾರಂಟಿ ಯೋಜನೆಗಳಿಂದ ದಲಿತರು, ಹಿಂದುಳಿದ ವರ್ಗ ಗಳಿಗೆ ಆರ್ಥಿಕ ಶಕ್ತಿ ತುಂಬಿದೆ. ಈ ಯೋಜನೆಗಳಿಂದ ಬಡವರು, ಶೋಷಿತರು ನೆಮ್ಮದಿಯ ಜೀವನ ನಡೆಸಲು ಕಾರಣವಾಗಿದೆ. 500 ಕೋಟಿ ಮಹಿಳಾ ಪ್ರಯಾಣಿಕರು ಪ್ರಯಾಣ ಮಾಡಿದ್ದಾರೆ. ಶಕ್ತಿ ಯೋಜನೆಯು ಹೆಣ್ಣು ಮಕ್ಕಳ ಆರ್ಥಿಕ ಅಭಿವೃದ್ಧಿಗೆ ಸಹಾಯವಾಗಿದೆ ಎಂದರು. ಜು.19ರಂದು ಮೈಸೂರಿನಲ್ಲಿ ನಡೆಯವ ಸಾಧನಾ ಸಮಾವೇಶದಲ್ಲಿ ಒಂದೂವರೆ ಲಕ್ಷ ಜನ ಭಾಗವಹಿಸಲಿದ್ದಾರೆ. ಮಾದಿಗ ಸಮುದಾಯದ ಮುಖಂಡರು, ಕಾರ್ಯಕರ್ತರು ಹೆಚ್ಚಿನ ಸಂಖ್ಯೆ ಯಲ್ಲಿ ಪಾಲ್ಗೊಳ್ಳಬೇಕು. ಮಾದಿಗ ಸಮುದಾಯಕ್ಕೆ ನ್ಯಾಯ ಸಿಗುವುದು ಸಿದ್ದರಾಮಯ್ಯ ಅವರಿಂದ ಹೊರತು ಬೇರೆ ಯಾವುದೇ ನಾಯಕರಿಂದ ಅಲ್ಲ ಎಂದರು. ಮಾಜಿ ಮಹಾಪೌರ ನಾರಾಯಣ, ಎಡತೊರೆ ನಿಂಗರಾಜು, ಚಾಮರಾಜನಗರ ಜಿಲ್ಲಾ ಆದಿಜಾಂ ಬವ ಮಹಾಸಭಾದ ಅಧ್ಯಕ್ಷ ಎಂ.ಶಿವಮೂರ್ತಿ, ವಿಜಯಶಂಕರ್, ರಾಮು, ಶಿವಣ್ಣ, ಪ್ರಕಾಶ್, ನಾಗರಾಜು, ರೇವಣ್ಣ, ಜಯಶಂಕರ್ ಇದ್ದರು.

ಆಗಸ್ಟ್ 20ಕ್ಕೆ ಅರಸು ಜನ್ಮ ದಿನ

ನಗರದ ಡಿಸಿ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ಮಾತನಾಡಿದರು.

ಮೈಸೂರು: ಮಾಜಿ ಮುಖ್ಯಮಂತ್ರಿ ದಿ.ದೇವರಾಜ ಅರಸು ಅವರು ನಮ್ಮ ಮೈಸೂರು ಜಿಲ್ಲೆಯವರಾಗಿದ್ದು, ಮಾದರಿ ರಾಜಕಾರಣಿ ಆಗಿದ್ದರು. ಅವರ ಜನ್ಮ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಡಾ.ಪಿ.ಶಿವರಾಜು ತಿಳಿಸಿದರು

ಜಿಲ್ಲಾಧಿಕಾರಿಗಳ ಕಛೇರಿಯ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಈ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅರಸು ಅವರ ಜನ್ಮ ದಿನಾಚರಣೆಯನ್ನು ಆಗಸ್ಟ್ 20ರಂದು ಬೆಳಗ್ಗೆ 10.30ಕ್ಕೆ ಕರ್ನಾಟಕ ಕಲಾ ಮಂದಿರದಲ್ಲಿ ಆಚರಿಸಲಾಗುವುದು. ದೇವರಾಜ ಅರಸು ಅವರು ರಾಜ್ಯಕ್ಕೆ ಮಾದರಿ ವ್ಯಕ್ತಿಯಾಗಿದ್ದರು. ಅವರು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಹಲವಾರು ಸುಧಾರಣೆಗಳನ್ನು ಜಾರಿಗೆ ತಂದರು ಎಂದು ತಿಳಿಸಿದರು.

ಎಲ್ಲಾ ಸರಕಾರಿ ಶಾಲಾ ಕಾಲೇಜುಗಳಲ್ಲಿ, ಹಾಸ್ಟೆಲ್‌ಗಳಲ್ಲಿ ಅರಸು ಅವರ ಜನ್ಮ ದಿನ ಆಚರಣೆ ಮಾಡಬೇಕು. ಮಕ್ಕಳಿಗೆ ಚರ್ಚಾ ಸ್ಪರ್ಧೆ, ಆಶುಭಾಷಣ ಸ್ಪರ್ಧೆ, ರಸಪ್ರಶ್ನೆ ಹಾಗೂ ಪ್ರಬಂಧ ಸ್ಪರ್ಧೆ ಗಳನ್ನು ಏರ್ಪಡಿಸಬೇಕು. ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿದವರಿಗೆ ಬಹುಮಾನ ವಿತರಣೆ ಮಾಡಲಾಗುವುದು ಎಂದು ತಿಳಿಸಿದರು.

ಕಲಾಮಂದಿರದ ಆವರಣದ ಸ್ವಚ್ಛತೆ ಹಾಗೂ ಶಾಮಿಯಾನ ವ್ಯವಸ್ಥೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ ಮಾಡಬೇಕು. ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಡಾ ಸುದರ್ಶನ್, ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್ , ದೇವರಾಜ ಅರಸು ಪ್ರತಿಮೆ ಪ್ರತಿಷ್ಠಾಪನಾ ಸಮಿತಿ ಗೌರವ ಅಧ್ಯಕ್ಷ ಎಂ. ಚಂದ್ರಶೇಖರ್, ಅಧ್ಯಕ್ಷ ಜಾಕೀರ್ ಹುಸೇನ್, ಪ್ರಧಾನ ಸಂಚಾಲಕ ಡೈರಿ ವೆಂಕಟೇಶ್, ವೀರಶೈವ ಮಹಾಸಭಾದ ಮೈಸೂರು ಜಿಲ್ಲಾ ನಿರ್ದೇಶಕ ಎಂ. ಷಡಕ್ಷರಿ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ನೌಕರರ ಬಗ್ಗೆ ದೂರು, ಕಠಿಣ ಕ್ರಮದ ಎಚ್ಚರಿಕೆ

ಕೆ.ಆರ್.ನಗರ: ಸರಕಾರಿ ಕಚೇರಿಗಳಿಗೆ ಬಂದ ಸಾರ್ವಜನಿಕರೊಂದಿಗೆ ಕೆಲ ಅಧಿಕಾರಿಗಳು ಮತ್ತು ಸಿಬ್ಬಂದಿ ಸೌಜನ್ಯದಿಂದ ವರ್ತಿಸುತ್ತಿಲ್ಲ ಹಾಗೂ ಕೆಲಸ ನಿರ್ವಹಿಸುತ್ತಿಲ್ಲ ಎಂಬ ದೂರುಗಳು ವ್ಯಾಪಕವಾಗಿ ಕೇಳಿಬಂದಿದ್ದು ಅಂತಹವರು ತಿದ್ದಿ ನಡೆಯದಿದ್ದರೆ ಮುಲಾಜಿಲ್ಲದೆ ಕಠಿಣ ಕ್ರಮಕ್ಕೆ ಶಿಫಾರಸ್ಸು ಮಾಡಲಾಗುತ್ತದೆ ಎಂದು ಶಾಸಕ ಡಿ.ರವಿಶಂಕರ್ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಚುನಾಯಿತ ಸದಸ್ಯರು ಮತ್ತು ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಿದಾಗ ಮಾತ್ರ ಸರ್ಕಾರದ ಯೋಜನೆಗಳು ಯಶಸ್ವಿಯಾಗಿ ಅನುಷ್ಠಾನಗೊಳ್ಳಲು ಸಾಧ್ಯ ಇದನ್ನು ಎಲ್ಲಾ ಇಲಾಖಾ ಅಧಿಕಾರಿಗಳು ಅರಿತುಕೊಳ್ಳಬೇಕು ಎಂದರು.

ಕಛೇರಿಗಳಿಗೆ ಬರುವ ಜನ ಸಾಮಾನ್ಯರ ಸಮಸ್ಯೆಗಳಿಗೆ ಪರಿಹರಿಸುವ ಕೆಲಸ ಮಾಡುವುದರ ಜತೆಗೆ ಸರಕಾರದ ಯೋಜನೆಗಳು ಅರ್ಹ ಫಲಾನುಭವಿಗಳ ಮನೆಗೆ ತಲುಪಿಸಬೇಕೆಂದು ತಿಳಿಸಿದರು.

ಪೊಲೀಸ್ ಇಲಾಖೆಯವರು ಸಮರ್ಪಕವಾಗಿ ಕೆಲಸ ಮಾಡುತ್ತಿಲ್ಲ. ಕಳ್ಳತನಗಳು ನಡೆದ ನಂತರ ಪ್ರಕರಣಗಳನ್ನು ದಾಖಲು ಮಾಡಿಕೊಂಡು ಪತ್ತೆ ಮಾಡುವ ಬದಲು ಕಳ್ಳತನ ನಡೆಯದಂತೆ ನೋಡಿಕೊಳ್ಳಲು ಕ್ರಮ ವಹಿಸಬೇಕು ಎಂದು ಸಲಹೆ ನೀಡಿದರು.

ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಶಾಸಕ ಡಿ.ರವಿಶಂಕರ್ ಮಾತನಾಡಿದರು.

ರೈತರ ಕೃಷಿ ಚಟುವಟಿಕೆಯ ಸಲಕರಣೆಗಳನ್ನು ಕಾಳ ಸಂತೆಯಲ್ಲಿ ಮಾರಾಟ ಮಾಡದೆ ಅರ್ಹ ಫಲಾನುಭವಿಗಳಿಗೆ ವಿತರಿಸಬೇಕು. ಬಿತ್ತನೆ ಬೀಜವನ್ನು ಪರೀಕ್ಷೆಗೆ ಒಳಪಡಿಸಿ ಬೀಜ ಕಳಪೆಯೆಂದು ಕಂಡಿ ಬಂದರೆ ಕ್ರಿಮಿನಲ್ ಮೊಕದ್ದಮೆ ಹೂಡಬೇಕೆಂದು ತಾಕೀತು ಮಾಡಿದರು.

ವಸತಿ ಶಾಲೆಗಳು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇಕಡ 100ರಷ್ಟು ಫಲಿತಾಂಶ ಪಡೆಯಬೇಕು ಈ ಬಾರಿ ಕಡಿಮೆ ಸಾಧನೆ ಮಾಡಿರುವುದರಿಂದ ನಾವು ಜಿಲ್ಲೆಯಲ್ಲಿ 5ನೇ ಸ್ಥಾನಕ್ಕಿಳಿಯಲು ಕಾರಣವಾಯಿತು. ಬಿಇಒ ಮುಖ್ಯಶಿಕ್ಷಕರುಗಳ ಸಭೆ ನಡೆಸಿ ಈ ಬಾರಿ ಉತ್ತಮ ಫಲಿತಾಂಶ ಪಡೆಯಲು ಬೇಕಾಗುವ ಸಿದ್ದತೆಗಳನ್ನು ಮಾಡಿಕೊಳ್ಳಬೇಕು ಎಂದು ಸೂಚಿಸಿದರು.

ಪುರಸಭೆಯವರು ನಗರದ ಜನತೆಗೆ ಶುದ್ದ ಕುಡಿಯುವ ನೀರನ್ನು ಸಮರ್ಪಕವಾಗಿ ಸರಬರಾಜು ಮಾಡಬೇಕು. ಇದರ ಜತೆಗೆ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕೆಂದು ಮುಖ್ಯಾಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಜಿ.ಲಕ್ಷ್ಮಿಕಾಂತರೆಡ್ಡಿ, ಜಿ.ಪಂ. ಸಿಇಒ ಯುತೇಶ್‌ಕುಮಾರ್, ಎಂಸಿಡಿಸಿಸಿ ಬ್ಯಾಂಕ್ ನಿರ್ದೇಶಕ ದೊಡ್ಡಸ್ವಾಮೇಗೌಡ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷೆ ಪುಷ್ಪಲತಾರಮೇಶ್, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಎಂ.ಎಸ್.ಮಹದೇವ್, ಉದಯಶಂಕರ್, ತಹಸಿಲ್ದಾರ್‌ಗಳಾದ ಜಿ. ಸುರೇಂದ್ರಮೂರ್ತಿ, ಎಸ್.ನರಗುಂದ, ತಾಪಂ ಇಒಗಳಾದ ವಿ.ಪಿ.ಕುಲದೀಪ್, ರವಿ ಹಾಜರಿದ್ದರು.

‘ಗೃಹ ಆರೋಗ್ಯ’ಕ್ಕೆ ಚಾಲನೆ

ಚಾಮರಾಜನಗರ: ಮನೆ ಬಾಗಿಲಲ್ಲಿಯೇ ವಿವಿಧ ಆರೋಗ್ಯ ಸಮಸ್ಯೆಗಳನ್ನು ಪತ್ತೆ ಹಚ್ಚಿ ಔಷಧ ವಿತರಿಸುವ ಗೃಹ ಆರೋಗ್ಯ ಯೋಜನೆಗೆ ಎಂ.ಎಸ್.ಐ.ಎಲ್ ಅಧ್ಯಕ್ಷರು ಹಾಗೂ ಶಾಸಕ ಸಿ. ಪುಟ್ಟರಂಗಶೆಟ್ಟಿ ಹಾಗೂ ಜಿಪಂ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಚಾಲನೆ ನೀಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ಶಾಸಕರಾದ ಸಿ. ಪುಟ್ಟರಂಗಶೆಟ್ಟಿ ಅವರು ಸ್ವತಃ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳುವ ಮೂಲಕ ಗೃಹ ಆರೋಗ್ಯ ಯೋಜನೆಗೆ ಚಾಲನೆ ನೀಡಿದರು. ನಂತರ ಅವರು ಮಾತನಾಡಿ, ಆರೋಗ್ಯ ಸಿಬ್ಬಂದಿ, ಆಶಾ ಕಾರ್ಯಕರ್ತರು ಮನೆ ಮನೆಗೆ ಬಂದಾಗ ಸಾರ್ವಜನಿಕರು ಆರೋಗ್ಯ ತಪಾಸಣೆ ಮಾಡಿಸಿಕೊಂಡು ಸಮಸ್ಯೆಗಳಿದ್ದಲ್ಲಿ ಸೂಕ್ತ ಚಿಕಿತ್ಸೆ ಪಡೆಯುವಂತೆ ಸಲಹೆ ನೀಡಿದರು.

ಜಿಪಂ ಸಿಇಒ ಮೋನಾ ರೋತ್ ಅವರು ಮಾತನಾಡಿ, ಗೃಹ ಆರೋಗ್ಯ ಯೋಜನೆಯಡಿ ಮನೆ ಮೆನೆಗೆ ಭೇಟಿ ನೀಡಿ ಆರೋಗ್ಯ ಪರೀಕ್ಷಿಸಲಾಗುತ್ತದೆ. ನಾಗರಿಕರು ಈ ಅವಕಾಶವನ್ನು ಸದುಪಯೋಗ ಮಾಡಿಕೊಳ್ಳಬೇಕು. ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದರು.

ಜಿಲ್ಲಾ ಸರ್ವೇಕ್ಷಣ ಅಧಿಕಾರಿ ಡಾ. ಸುಂದರೇಶ್ ಅವರು ಮಾಹಿತಿ ನೀಡಿ, ಆರೋಗ್ಯ ಸಿಬ್ಬಂದಿ ಮನೆ ಮನೆಗೆ ಭೇಟಿ ನೀಡಿ ಆರೋಗ್ಯ ಸಮಸ್ಯೆ ಇರುವ ಜನರನ್ನು ಗುರುತಿಸಿ ತಜ್ಞ ವೈದ್ಯರಲ್ಲಿ ಸಲಹೆ ಮತ್ತು ಚಿಕಿತ್ಸೆ ಪಡೆಯಲು ಜಾಗೃತಿ ಮೂಡಿಸಲಿದ್ದಾರೆ. ಅಧಿಕ ರಕ್ತದೊತ್ತಡ, ಮಧುಮೇಹ, ಡಯಾಬಿಟಿಕ್ ಫುಟ್, ಡಯಾಬಿಟಿಕ್ ರೆಟಿನೋಪತಿ, ಬಾಯಿ ಮತ್ತು ಸ್ತನ, ಗರ್ಭಕಂಠದ ಕ್ಯಾನ್ಸರ್, ದೀರ್ಘಕಾಲದ ಮೂತ್ರಪಿಂಡ ಖಾಯಿಲೆ, ಲಿವರ್ ತೊಂದರೆ, ರಕ್ತ ಹೀನತೆ, ಮಾನಸಿಕ ಆರೋಗ್ಯ ಸೇರಿ ಒಟ್ಟು 14 ಅಸಂಕ್ರಾಮಿಕ ರೋಗಗಳಿಗೆ ತಪಾಸಣೆ ನಡೆಸಿ ಚಿಕಿತ್ಸೆ ನೀಡಲಾಗುತ್ತಿದೆ ಎಂದರು.

ಟಿಎಚ್‌ಒ ಡಾ.ಶ್ರೀನಿವಾಸ್, ಇತರ ಮುಖಂಡರು, ಸಮುದಾಯ ಆರೋಗ್ಯಾಧಿಕಾರಿಗಳು ಇದ್ದರು.

ಗ್ರಾಪಂಗೆ ಅಧ್ಯಕ್ಷರ ಆಯ್ಕೆ


ನೂತನ ಅಧ್ಯಕ್ಷರಾಗಿ ಸೀಗೂರು ವಿಜಯ್‌ಕುಮಾರ್ ಆಯ್ಕೆಯಾಗಿದ್ದಾರೆ.

ಪಿರಿಯಾಪಟ್ಟಣ: ತಾಲೂಕಿನ ಹಿಟ್ನೆ ಹೆಬ್ಬಾಗಿಲು ಗ್ರಾಮ ಪಂಚಾಯಿತಿ ಯ ನೂತನ ಅಧ್ಯಕ್ಷರಾಗಿ ಸೀಗೂರು ವಿಜಯ್‌ಕುಮಾರ್ ಮತ್ತು ಉಪಾಧ್ಯಕ್ಷರಾಗಿ ಯಶೋಧಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದೆ ಇದ್ದ ಅಧ್ಯಕ್ಷ ಮತ್ತು ಉಪಾಧ್ಯಕ್ಷರು ತಮ್ಮ ಸ್ಥಾನ ಗಳಿಗೆ ರಾಜೀನಾಮೆ ನೀಡಿದ ಕಾರಣ ಚುನಾವಣೆ ನಡೆಸ ಲಾಯಿತು. 18 ಜನ ಸದಸ್ಯ ಬಲ ಹೊಂದಿರುವ ಪಂಚಾಯಿತಿಯಲ್ಲಿ ಇವರಿಬ್ಬರೇ ಮಾತ್ರ ನಾಮ ಪತ್ರ ಸಲ್ಲಿಸಿದರು. ಚುನಾವಣಾಧಿಕಾರಿಯಾಗಿದ್ದ ಪಶು ಸಂಗೋಪನೆ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಸೋಮಯ್ಯ ಆಯ್ಕೆಯನ್ನು ಘೋಷಿಸಿದರು.

ನೂತನ ಅಧ್ಯಕ್ಷ ಸೀಗೂರು ವಿಜಯ ಕುಮಾರ್ ಮಾತನಾಡಿ, ಅಧಿಕಾರ ಜವಾಬ್ದಾರಿಗಳನ್ನು ಹೆಚ್ಚಿಸುವ ಶಕ್ತಿಯಾಗಿದ್ದು, ಗ್ರಾಮ ಪಂಚಾಯಿತಿ ಅಭಿವೃದ್ದಿ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸುತ್ತೇನೆ. ನನ್ನ ಮೇಲೆ ಇಟ್ಟಿರುವ ನಂಬಿಕೆ ಭರವಸೆಗಳನ್ನು ಹಿಡೇರಿಸುತ್ತೇನೆ ಎಂದರು.

ಕೆಪಿಸಿಸಿ ಸದಸ್ಯ ಅನಿಲ್ ಕುಮಾರ್, ಸದಸ್ಯರಾದ ವನಜಾಕ್ಷಮ್ಮ, ವರನಂದಿ, ಕಾಮರಾಜು, ಸುಧಾ, ಮಹದೇವ, ಮೀನಾಕ್ಷಿ, ಕುಮಾರ, ಛಾಯಾ ಮಹಾದೇವ್ರ, ವಿಕುಮಾರ್, ಮಹದೇವ, ಶಿವಕುಮಾರ್, ಸರೋಜಾ, ಎ.ಟಿ.ಮಂಜು ನಾಯ್ಕ, ಸುಮಾ ಭಾಗವಹಿಸಿದ್ದರು.

ಎಂಡಿಸಿಸಿ ಬ್ಯಾಂಕ್ ನಿರ್ದೇಶಕ ಲೋಕೇಶ್ ಟಿ.ಈರಯ್ಯ,ಆಯಿತನಹಳ್ಳಿ ಮಹದೇವ್, ಹೊಲದಪ್ಪ, ನಿರ್ದೇಶಕ ರವಿ, ಚಪ್ಪರದಳ್ಳಿ ರವಿ,ಶಿವಣ್ಣ ಭೂತನಳ್ಳಿ, ಪಿ.ಮಹದೇವ್, ಪಿ.ಪಿ.ಮಹದೇವ್, ಪುಟ್ಟಯ್ಯ, ಶಿವಶಂಕರ್ ಇದ್ದರು.

ಪತ್ರಕರ್ತ ಡಾ.ಗಣಪತಿ, ನಟಿ ಸರೋಜಾದೇವಿಗೆ ಶ್ರದ್ಧಾಂಜಲಿ

ಕೆ.ಆರ್.ಪೇಟೆ: ಕನ್ನಡ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಹಿರಿಯ ಪತ್ರಕರ್ತರು ಹಾಗೂ ಮೈಸೂರುಮಿತ್ರ ಹಾಗೂ ಸ್ಟಾರ್ ಆಫ್ ಮೈಸೂರು ಪತ್ರಿಕೆಗಳ ಸಂಸ್ಥಾಪಕ ಸಂಪಾದಕರಾದ ಡಾ.ಕೆ.ಬಿ.ಗಣಪತಿ ಅವರು ಮೂಡಿಸಿರುವ ಹೆಜ್ಜೆ ಗುರುತುಗಳು ಯುವ ಪತ್ರಕರ್ತರಿಗೆ ದಾರಿದೀಪವಾಗಲಿದೆ. ಎರಡೂ ಪತ್ರಿಕೆಗಳನ್ನು ತಮ್ಮ ಪರಿಶ್ರಮದಿಂದ ನಿರಂತರ ಅರ್ಧ ಶತಮಾನ ದಾಟಿಸಿದ ಕೀರ್ತಿ ಕೆ.ಬಿ.ಗಣಪತಿ ಅವರಿಗೆ ಸಲ್ಲುತ್ತದೆ ಎಂದು ತಾ.ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಎಚ್.ಆರ್ .ಪೂರ್ಣಚಂದ್ರತೇಜಸ್ವಿ ಹೇಳಿದರು.

ಅವರು ಪಟ್ಟಣದ ಪ್ರವಾಸಿ ಮಂದಿರದ ಆವರಣದಲ್ಲಿ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘ, ತಾಕಸಾಪ, ಜಾನಪದ ಪರಿಷತ್, ಕರ್ನಾಟಕ ರಕ್ಷಣಾ ವೇದಿಕೆ, ಯುವ ರಕ್ಷಣಾ ವೇದಿಕೆ, ಮತ್ತಿತರ ಸಂಘಟನೆಗಳ ಸಹಯೋಗದೊಂದಿಗೆ ಪತ್ರಿಕೋದ್ಯಮಿ ಡಾ.ಕೆ.ಬಿ.ಗಣಪತಿ ಮತ್ತು ಹಿರಿಯ ಬಹುಭಾಷಾ ನಟಿ ಬಿ. ಸರೋಜಾದೇವಿ ಅವರಿಗೆ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಎರಡೂ ಚೇತನಗಳಿಗೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

ವಿವಿಧ ಸಂಘ ಸಂಸ್ಥೆಗಳಿಂದ ಪತ್ರಕರ್ತ ಡಾ.ಗಣಪತಿ, ನಟಿ ಸರೋಜಾದೇವಿ ಅವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸುಮಾರು ಐದು ದಶಕಗಳ ಕಾಲ ಪತ್ರಿಕೆಯನ್ನು ಮುನ್ನಡೆಸುವುದು ಸವಾಲಿನ ಕೆಲಸವಾಗಿದೆ. ಆದರೂ ಮೈಸೂರುಮಿತ್ರ ಕನ್ನಡ ದಿನಪತ್ರಿಕೆ, ಸ್ಟಾರ್ ಆಫ್ ಮೈಸೂರು ಆಂಗ್ಲ ಸಂಜೆ ದಿನಪತ್ರಿಕೆಯನ್ನು ನಿರಂತರ ಐದು ದಶಕಗಳ ಕಾಲ ಯಶಸ್ವಿಯಾಗಿ ಮುನ್ನಡೆಸುವ ಮೂಲಕ ಪತ್ರಿಕೋದ್ಯಮದಲ್ಲಿ ತಾವು ಹೊಂದಿದ್ದ ಆಸಕ್ತಿಯನ್ನು ತೋರಿಸಿಕೊಟ್ಟಿದ್ದಾರೆ. ನೂರಾರು ಯುವ ಪತ್ರಕರ್ತರನ್ನು ಹುಟ್ಟು ಹಾಕಿ, ವಸ್ತುನಿಷ್ಠ ವರದಿಯನ್ನು ಪ್ರಕಟಿಸುವ ಮೂಲಕ ಪತ್ರಿಕೋದ್ಯಮದ ಘನತೆಯನ್ನು ಹೆಚ್ಚಿಸಿದ್ದರು. ಸ್ವತಃ ತಾವೇ ಪ್ರಚಲಿತ ವಿದ್ಯಮಾನ ಕುರಿತು ವಿಶೇಷ ವರದಿಯನ್ನು ಬರೆಯುವ ಮೂಲಕ ಓದುಗರ ಮನ ಗೆದ್ದಿದ್ದರು. ಮೈಸೂರು ವಿಶ್ವವಿದ್ಯಾನಿಲಯ ಗೌರವ ಡಾಕ್ಟರೇಟ್ ಪದವಿ ನೀಡಿ ಗೌರವಿಸಿತ್ತು ಎಂದರು. ಈಚೆಗೆ ಅಗಲಿದ ಹಿರಿಯ ಬಹುಭಾಷಾ ನಟಿ ಬಿ.ಸರೋಜಾದೇವಿ ಅವರು ಕನ್ನಡ, ಹಿಂದಿ, ತಮಿಳು, ತೆಲುಗು ಹೀಗೆ ಬಹುಭಾಷೆಗಳಲ್ಲಿ ನಟಿಸುವ ಮೂಲಕ ಅಭಿನಯ ಸರಸ್ವತಿಯಾಗಿ ಸಿನಿಪ್ರಿಯರನ್ನು ಸುಮಾರು 6 ದಶಕಗಳ ಕಾಲ ರಂಜಿಸಿದ್ದಾರೆ ಎಂದು ತೇಜಸ್ವಿ ಸ್ಮರಿಸಿದರು.

ಕಸಾಪ ಮಾಜಿ ಅಧ್ಯಕ್ಷರಾದ ಕೆ.ಆರ್ .ನೀಲಕಂಠ, ಬಳ್ಳೇಕೆರೆ ಮಂಜುನಾಥ್, ಸಾಹಿತಿ ಬಲ್ಲೇನಹಳ್ಳಿ ಮಂಜುನಾಥ್ ಮಾತನಾಡಿದರು.

ಶ್ರದ್ಧಾಂಜಲಿ ಸಭೆಯಲ್ಲಿ ನಿವೃತ್ತ ಪ್ರಾಂಶುಪಾಲ ಕೆ.ಕಾಳೇಗೌಡ, ತಾಜಾಪ ಅಧ್ಯಕ್ಷ ಕೆ.ಎಸ್.ಸೋಮಶೇಖರ್, ಕಾರ್ಯದರ್ಶಿ ಕತ್ತರಘಟ್ಟ ವಾಸು, ಪತ್ರಕರ್ತರ ಸಂಘದ ಅಧ್ಯಕ್ಷ ಅಪ್ಪನಹಳ್ಳಿ ಅರುಣ್‌ಕುಮಾರ್, ಗ್ರಾ.ಪಂ. ಸದಸ್ಯ ಶ್ರೀನಿವಾಸ್, ಒಕ್ಕೂಟದ ಅಧ್ಯಕ್ಷ ಕೆ. ಎಂ.ಶಿವಪ್ಪ, ಕಸಾಪ ಕಾರ್ಯದರ್ಶಿ ಕಟ್ಟೆ ಮಹೇಶ್, ವಕೀಲ ನಯಾಜ್ ಪಾಷಾ, ಕರವೇ ಅಧ್ಯಕ್ಷ ಜಾವಿದ್, ನಿಸಾರ್, ಭಾಸ್ಕರ್, ಗ್ರಾ.ಪಂ.ಮಾಜಿ ಅಧ್ಯಕ್ಷ ಹೆಚ್ .ವಿ.ಸತೀಶ್, ಪತ್ರಕರ್ತರಾದ ಹೆಚ್ .ಬಿ.ಮಂಜುನಾಥ್, ವಿ.ಲೋಕೇಶ್, ಎಸ್. ರವಿ, ಕಾಮನಹಳ್ಳಿ ಮಂಜುನಾಥ್, ಗೋವಿಂದರಾಜು, ರಂಗನಾಥ್ ಇದ್ದರು.

ಸಮಾಚಾರ ಸಣ್ಣದಲ್ಲ

ಡಿಸಿಸಿ ಬ್ಯಾಂಕ್ ನಿರ್ದೇಶಕ ಹುಟುಹಬ್ಬ

ಕೋಲಾರ: ಡಿಸಿಸಿ ಬ್ಯಾಂಕ್ ನಿರ್ದೇಶಕ ಎಲ್.ಎ. ಮಂಜುನಾಥ್ ಅವರ ಹುಟ್ಟುಹಬ್ಬ ಆಚರಣೆ ಸಂದರ್ಭದಲ್ಲಿ ಜಿಲ್ಲಾ ಅತಿ ಹಿಂದುಳಿದ ವರ್ಗಗಳ ಜಾಗೃತಿ ವೇದಿಕೆ ಅಧ್ಯಕ್ಷ ವಕೀಲ ದಿವಾಕರ್ ಯಾದವ್ ಅವರು ಶುಭಾಶಯ ಕೋರಿ ಅಭಿನಂದಿಸಿದರು. ಮುಖಂಡರಾದ ಶ್ರೀನಿವಾಸ್, ಧನಂಜಯರಾಜ್, ಫಲ್ಗುಣ, ರಾಜೇಶ್ ಸಿಂಗ್ ಮತ್ತಿತರರು ಇದ್ದರು.

ವಾಲ್ಮೀಕಿ ನಿಗಮ ವಂಚನೆ: ಎಫ್ ಐ ಆರ್

ತುಮಕೂರು: ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಫಲಾನುಭವಿಗಳಿಗೆ ಹಣ ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಭ್ರಷ್ಟಾಚಾರದಲ್ಲಿ ಭಾಗಿಯಾಗಿದ್ದ ಅಧಿಕಾರಿಗಳ ವಿರುದ್ಧ ಎಫ್ ಐ ಆರ್ ದಾಖಲಾಗಿದ್ದು ತನಿಖೆಗೆ ಕ್ರಮವಹಿಸಲಾಗಿದೆ. ಮಹರ್ಷಿ ವಾಲ್ಮೀಕಿ ನಿಗಮದ ಮಾಜಿ ಜಿಲ್ಲಾ ವ್ಯವಸ್ಥಾಪಕ ಶ್ರೀಧರ್ ಹಾಗೂ ಇತರ ಅಧಿಕಾರಿಗಳ ವಿರುದ್ಧ ಎಫ್ ಐ ಆರ್ ದಾಖಲಾಗಿದ್ದು, ಫಲಾನುಭವಿಗಳಿಗೆ 24 ಲಕ್ಷ ಹಣ ವಂಚನೆ ಮಾಡಿದ್ದ ಆರೋಪದ ಮೇಲೆ ಕ್ಯಾತ್ಸಂದ್ರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಹರ್ಷಿ ವಾಲ್ಮೀಕಿ ನಿಗಮದ ಹಾಲಿ ವ್ಯವಸ್ಥಾಪಕಿ ಎಚ್.ಸಿ.ಭಾಗೀರಥಿ ಪ್ರಕರಣದ ಕುರಿತು ಪೊಲೀಸ್ ಠಾಣೆಯಲ್ಲಿ ಫಲಾನುಭವಿಗಳ ಪ್ರತಿಭಟನೆ ಬಳಿಕ ಪ್ರಕರಣವನ್ನು ದಾಖಲಿಸಲಾಗಿದೆ. ಏನಿದು ವಂಚನೆ? 12 ಜನ ಅಮಾಯಕ ಬಡ ಫಲಾನುಭವಿಗಳಿಗೆ ಅಧಿಕಾರಿಗಳು ಮೋಸ ಮಾಡಿದ್ದು, ಸಾಕ್ಷಿ ಸಮೇತ ಹಗರಣವನ್ನು ಫಲಾನುಭವಿಗಳೇ ಬಿಚ್ಚಿಟ್ಟಿದ್ದರು. ಪಾವಗಡ ತಾಲೂಕಿನ 6 ಜನ ಹಾಗೂ ಶಿರಾ ತಾಲೂಕಿನ 6 ಜನರಿಗೆ ಅಧಿಕಾರಿಗಳಿಂದ ವಂಚನೆ ಆಗಿದ್ದು, 2019-20 ರಲ್ಲಿ ಫಲಾನುಭವಿಗಳ ಹೆಸರಲ್ಲಿ ಬಿಡುಗಡೆ ಮಾಡಿಸಿ ತಾವೇ ನುಂಗಿದ್ದರು. ಅರ್ಜಿಗಳಲ್ಲಿ ಫಲಾನುಭವಿಗಳ ನಕಲಿ ಫೋನ್ ನಂಬರ್ ಹಾಕುವುದಲ್ಲದೇ, ನಕಲಿ ಸಹಿ ಮಾಡಿ ಹಣ ವಂಚನೆ ಮಾಡಿದ್ದು, 24 ಲಕ್ಷ ಹಣ ಬ್ಯಾಂಕ್ ಆಫ್ ಮಹಾರಾಷ್ಟ್ರ ಕೋಲಾರ ಶಾಖೆಗೆ ವರ್ಗಾವಣೆ ಮಾಡಿಸಿದ್ದರು.

ವಿರಾಮ
ಪ್ರತಿ ಭಾನುವಾರ

ಜಿಲ್ಲಾಧಿಕಾರಿಗಳ ದಿಢೀರ್ ಭೇಟಿ | ಅಧ್ಯಕ್ಷರೊಂದಿಗೆ ಸಭೆ | ದಾಖಲೆಗಳ ಪರಿಶೀಲನೆ

ಹಳಿ ತಪ್ಪಿದ ನಗರಸಭೆ ಆಡಳಿತ!

ಚಿಕ್ಕಬಳ್ಳಾಪುರ: ನಗರಸಭೆಗೆ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ದಿಢೀರ್ ಭೇಟಿ ನೀಡಿದ್ದು ಈ ವೇಳೆ ಬಿ ಖಾತಾ ವಿಚಾರ, ಕಡತಗಳ ನಾಪತ್ತೆ, ಸಾರ್ವಜನಿಕರಿಗೆ ಸ್ಪಂದನೆಯಿಲ್ಲದಿರುವ ಕುರಿತು ಅಧ್ಯಕ್ಷ ಗಜೇಂದ್ರ, ಆಯುಕ್ತರಾದ ಮನ್ಸೂರ್ ಅಲಿ ಅವರಿಂದ ಮಾಹಿತಿ ಪಡೆದುಕೊಂಡರು.

ಚಿಕ್ಕಬಳ್ಳಾಪುರ ನಗರಸಭೆಯ ಜನವಿರೋಧಿ ಕಾರ್ಯನಿರ್ವಹಣೆ, ಕಡತಗಳ ನಾಪತ್ತೆ, ಕಸದಂತೆ ಬಿ-ಖಾತಾ ದಾಖಲಾತಿ ಪತ್ರಗಳನ್ನು ಎಲ್ಲೆಂದರಲ್ಲಿ ಬಿಸಾಕಿರುವುದು,ಸಕಾಲ ಕೌಂಟರ್ ತೆರೆಯದಿರುವುದು, ಡಿಜಿಟಲ್ ಪೇಮೆಂಟ್ ವ್ಯವಸ್ಥೆ ಮಾಡದಿರುವುದು ಹೀಗೆ ಇಲ್ಲಿರುವ ಸಮಸ್ಯೆಗಳ ಬಗ್ಗೆ ಸಾರ್ವಜನಿಕರು ಸೇರಿದಂತೆ ನಗರಸಭೆಯ ಆಡಳಿತ ಪಕ್ಷದ ಸದಸ್ಯರು ಬಹಿರಂಗವಾಗಿ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದರು.ಇದಕ್ಕೆ ವಿರೋಧ ಪಕ್ಷದ ಸದಸ್ಯರು ಕೂಡ ದನಿಗೂಡಿಸಿದ್ದರು. ಈ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿಗಳು ಗುರುವಾರ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ, ಕಡತಗಳ ಸರಿಯಾದ ನಿರ್ವಹಣೆ ಮಾಡಬೇಕು. ಕ್ರಮವಾಗಿ ನಮೂದು ಮಾಡಬೇಕು. ಸಾರ್ವಜನಿಜಕರು ನೀಡುವ ದಾಖಲೆ ಪತ್ರಗಳು ಕಳುವಾಗುವುದು,ಕಸದಂತೆ ಎಲ್ಲೆಂದರಲ್ಲಿ ಬಿಸಾಡುವುದು ಮಾಡಬಾರದು ಎಂದು ಖಡಕ್ ಎಚ್ಚರಿಕೆ ನೀಡಿದರು.

ನಾನಾ ದೂರುಗಳು: ಮಾಧ್ಯಮದ ಜತೆ ಮಾತನಾಡಿದ ಜಿಲ್ಲಾಧಿಕಾರಿ, ಇ.ಸಿ. ಹಳೆಯದು ಕೊಡಬೇಕಿತ್ತು.ಬಿ.ಖಾತಾ ಹಿಂಬರಹದ ಪ್ರತಿಯ ಸಮಸ್ಯೆ, ಅರ್ಜಿಗಳನ್ನು ಕೊಟ್ಟಂತಹವರಿಗೆ ನಮ್ಮ ಅರ್ಜಿಗಳು ದೊರೆಯುತ್ತಿಲ್ಲ, ಎಲ್ಲೆಂದರಲ್ಲಿ ಬಿಸಾಡಿದ್ದಾರೆ. ಹೀಗೆ ನಾನಾ ದೂರುಗಳು ಬಂದಿದ್ದವು. ಈ ಬಗ್ಗೆ ಪರಿಶೀಲನೆ ನಡೆಸಿ ಸರಿಪಡಿಸಿಕೊಳ್ಳಲು ನಗರಾಡಳಿತಕ್ಕೆ ಸೂಚನೆ ನೀಡಲಾಗಿದೆ ಎಂದರು.

9817 ಖಾತೆ ಸಿದ್ದ : ಈವರೆಗೆ ಬಿ ಖಾತಾ ಆಂದೋಲನ ಪ್ರಾರಂಭವಾದಾಗಿನಿಂದ ಚಿಕ್ಕಬಳ್ಳಾಪುರ ನಗರಸಭೆಯಲ್ಲಿ 7697 ಎ-ಖಾತಾ ಮಾಡಲಾಗಿದೆ,2120 ಬಿ ಖಾತಾ ಮಾಡಲಾಗಿದ್ದು ಒಟ್ಟು 9817 ಖಾತೆಗಳನ್ನು ನಗರಾಡಳಿತ ಮಾಡಿದೆ.ಈ ಪೈಕಿ 902 ಬಿಖಾತೆ, 774 ಎ ಖಾತೆ ವಿತರಣೆ ಮಾಡಲಾಗಿದೆ.ನಗರಸಭೆ ಕಮಿಷನರ್ ಅವರು ಎಲ್ಲಾ ಸರಿಯಿದೆ ಎಂದು ಅಪ್ರೂವಲ್ ಮಾಡಿದ್ದರೆ ಅಲ್ಲಿಗೆ ಅದು ಖಾತಾ ಆಗಿದೆ ಎಂದು ಅರ್ಥ.ಆನಂತರ ಅರ್ಜಿದಾರರು ಇ.ಆಸ್ತಿ ತಂತ್ರಾಂಶದ ವೆಬ್‌ಸೈಟ್‌ಗೆ ಹೋಗಿ ಅಪ್ರೂವ್ ಪ್ರತಿಯನ್ನು ಅವರಿದ್ದಲ್ಲಿಯೇ ಆನ್ಲೈನ್ ಮೂಲಕ ಪಡೆಯಬಹುದು.ಯಾರನ್ನೂ ಕಾಯುವ ಅವಶ್ಯಕತೆಯಿಲ್ಲ ಎಂದು ಸ್ಪಷ್ಟಪಡಿಸಿದರು.

ಚಿಕ್ಕಬಳ್ಳಾಪುರ ನಗರಸಭೆಗೆ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ದಿಢೀರ್ ಭೇಟಿ ನೀಡಿ ಕಡತಗಳನ್ನು ಪರಿಶೀಲಿಸಿದರು.

ಖಾತಾ ಸಮಸ್ಯೆ ಪರಿಹಾರ: ಬಿ ಖಾತಾ, ಅಥವಾ ಎ ಖಾತಾ ಮಾಡಲು ಬೇಕಾದ ದಾಖಲಾತಿಗಳ ಬಗ್ಗೆ ಸಾರ್ವಜನಿಕರಿಗೆ ಜಿಲ್ಲಾಡಳಿತ, ನಗರಾಡಳಿತ ಸಾಕಷ್ಟು ಪ್ರಚಾರ ಮಾಡಿತ್ತು. ಇದರ ಹೊರತಾಗಿಯೂ ನಗರವಾಸಿಗಳು ಇ.ಸಿ. ಸಲ್ಲಿಸುವಾಗ ಸೇಲ್ ಡೀಡ್ ಮಾಡಿಸಿರುವ ದಿನಾಂಕದಿಂದ ಹಿಂದಿನದನ್ನು ಕೊಡಬೇಕಿತ್ತು.ಆದರೆ ಬಹಳಷ್ಟು ಮಂದಿ ಸೇಲ್ ಡೀಡ್ ನೋಂದಣಿ ಆದ ನಂತರದ್ದು ಕೊಟ್ಟಿದ್ದಾರೆ. ಹೀಗಾಗಿ ಕಂದಾಯ ಮತ್ತು ಇಸಿಯನ್ನು ಯಾರು ನಗರಸಭೆ ಸೂಚಿಸಿದ ನಿಯಮಾವಳಿಯಂತೆ ಸಲ್ಲಿಸಿದ್ದಾರೋ ಅವರೆಲ್ಲರಿಗೂ ಎ ಮತ್ತು ಬಿ-ಖಾತೆ ಮಾಡಿಕೊಡಲಾಗಿದೆ.ಇ.ಸಿ ಮತ್ತು ಟ್ಯಾಕ್ಸ್ ತುಂಬಿದವರಿಗೆ ಖಾತೆ ಮಾಡಿ, ಖುದ್ದಾಗಿ ಅವರ ಮನೆ ಬಾಗಿಲಿಗೆ ತಲುಪಿಸಿ, ಒಂದುವೇಳೆ ಯಾರು ಈ ನಿಯಮ ಪಾಲಿಸಿಲ್ಲವೋ ಅಂತಹವರ ಅರ್ಜಿಯನ್ನು ಕ್ಯಾನ್ಸಲ್ ಮಾಡಿ ಅವರಿಗೆ ಹಿಂಬರಹ ನೀಡಿ ಎಂದು ಸೂಚಿಸಿರುವುದಾಗಿ ಡಿಸಿ ತಿಳಿಸಿದರು.

ಭೌತಿಕ ಅರ್ಜಿ ಸ್ವೀಕಾರ : ಜು.11ರ ಜಿಲ್ಲಾಧಿಕಾರಿಗಳ ಸಭೆಯ ತೀರ್ಮಾನದಂತೆ ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಸಾರ್ವಜನಿಕರಿಂದ ಖಾತೆ ಕೋರಿ ಬರುವ ಅರ್ಜಿಗಳನ್ನು ಸಕಾಲದಲ್ಲಿ ಮಾತ್ರ ಸ್ವೀಕರಿಸಬೇಕು.ಆನ್ಲೈನ್‌ನಲ್ಲಿ ಅರ್ಜಿ ಸ್ವೀಕರಿಸಿ ಖಾತೆ ಮಾಡಲು ಬೇಕಾದ ಎಲ್ಲಾ ಪತ್ರವ್ಯವಹಾರವನ್ನು ಕೂಡ ಆನ್ಲೈನ್‌ನಲ್ಲಿಯೇ ಮಾಡಬೇಕು ಎಂದು ತಾಕೀತು ಮಾಡಿದರು. ಈ ವೇಳೆ ನಗರಸಭೆ ಅಧ್ಯಕ್ಷ ಗಜೇಂದ್ರ, ಆಯುಕ್ತ ಮನ್ಸೂರ್ ಅಲಿ, ಕಚೇರಿ ಸಿಬ್ಬಂದಿ ಇದ್ದರು.

ಕಾಮಗಾರಿಗಳಿಗೆ ಶಾಸಕ ಸುರೇಶ್‌ಬಾಬು ಚಾಲನೆ

ಚಿಕ್ಕನಾಯಕನಹಳ್ಳಿ : ತಾಲೂಕಿನಾದ್ಯಂತ 1.40 ಕೋಟಿ ರೂ. ವೆಚ್ಚದಲ್ಲಿ ಸಿ.ಸಿ. ರಸ್ತೆ ಕಾಮಗಾರಿಗಳು ಹಾಗೂ 20 ಲಕ್ಷ ರೂ. ವೆಚ್ಚದಲ್ಲಿ ಸೊರಲಮಾವು ಗ್ರಾಮದಲ್ಲಿ ಸ್ಮಶಾನ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ ಎಂದು ಶಾಸಕ ಸಿ.ಬಿ. ಸುರೇಶ್‌ಬಾಬು ಹೇಳಿದ್ದಾರೆ.

ಬೆಳಗುಲಿ ಪ್ರೌಢಶಾಲೆಗೆ ಭೇಟಿ ನೀಡಿ ಮಾತನಾಡಿದ ಅವರು, ಕಳೆದ ಎರಡು ವರ್ಷಗಳಿಂದ ಎಸ್‌ಎಸ್‌ಎಲ್‌ಸಿ ಫಲಿತಾಂಶದಲ್ಲಿ ನಮ್ಮ ತಾಲೂಕು ಜಿಲ್ಲೆಗೆ ಪ್ರಥಮ ಸ್ಥಾನದಲ್ಲಿದೆ. ಇದಕ್ಕೆ ಇಲ್ಲಿನ ಶಿಕ್ಷಕರು ಹಾಗೂ ಮಕ್ಕಳೇ ಕಾರಣ. ಈ ವರ್ಷವೂ ರಾಜ್ಯ ಮಟ್ಟದಲ್ಲಿ ನಮ್ಮ ತಾಲೂಕಿನ ಹೆಸರು ಬರಬೇಕು ಎಂಬ ಉದ್ದೇಶದಿಂದ ಪ್ರತಿ ಭಾನುವಾರ ಪ್ರೇರಣಾ ಶಿಬಿರಗಳನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಹಂದನಕೆರೆ ಹಾಗೂ ಹುಳಿಯಾರು ಹೋಬಳಿಯ ಹಲವು ತಾಂಡಗಳಲ್ಲಿ ಒಟ್ಟು 1.40 ಕೋಟಿ ರೂ. ವೆಚ್ಚದಲ್ಲಿ ಸಿ.ಸಿ. ರಸ್ತೆಗಳ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದರು. ಮಲ್ಲೇನಹಳ್ಳಿ ತಾಂಡ್ಯ, ಟಿ.ತಾಂಡ್ಯ, ನಿರುವಗಲ್ ಕಾಲೋನಿ, ಬೆಳಗುಲಿ ಕಾಲೋನಿ, ಎಂ.ಹೆಚ್.ಕಾಲೋನಿ, ಬೈರಾಪುರ ಕೋಡಿತಾಂಡ್ಯ, ಚಿಕ್ಕಬಿದರೆ ರಾಮನಾಯ್ಕ ತಾಂಡ್ಯ, ಸೋಮನಹಳ್ಳಿ ತಾಂಡ್ಯ, ನಾನ್ಯಾನಾಯ್ಕನ ತಾಂಡ್ಯ, ಬಾದಿಹಟ್ಟಿ, ಉಮ್ಲಾನಾಯ್ಕನ ತಾಂಡ್ಯ, ಮರೆನಡು ಪಾಳ್ಯ, ದಬ್ಬಗುಂಟೆ ಬೋವಿಕಾಲೋನಿಗಳಲ್ಲಿ ನಡೆಯಲಿವೆ. ಜೊತೆಗೆ, 20 ಲಕ್ಷ ರೂ. ವೆಚ್ಚದಲ್ಲಿ ಸೊರಲಮಾವು ಗ್ರಾಮದ ಸ್ಮಶಾನ ಅಭಿವೃದ್ಧಿಗೂ ಚಾಲನೆ ನೀಡಲಾಗಿದೆ.

ಬಿಇಒ ಕಾಂತರಾಜು, ಪಿಎಲ್‌ಡಿ ಬ್ಯಾಂಕ್ ಉಪಾಧ್ಯಕ್ಷ ದಬ್ಬಗುಂಟೆ ರವಿಕುಮಾರ್, ನಿರ್ದೇಶಕ ರಾಮಚಂದ್ರಯ್ಯ, ಮಾಜಿ ಜಿ.ಪಂ. ಸದಸ್ಯೆ ಲೋಹಿತಾಬಾಯಿ, ಮಾಜಿ ತಾ.ಪಂ. ಅಧ್ಯಕ್ಷೆ ಚೇತನಾ ಗಂಗಾಧರ್ ಉಪಸ್ಥಿತರಿದ್ದರು.

ಶಾಸಕ ಸಿ.ಬಿ. ಸುರೇಶ್‌ಬಾಬು ಅವರು 1.40 ಕೋಟಿ ರೂ. ವೆಚ್ಚದ ಸಿ.ಸಿ. ರಸ್ತೆಗಳ ನಿರ್ಮಾಣಕ್ಕೆ ಗುದ್ದಲಿ ಪೂಜೆ ನೆರವೇರಿಸಿದರು.

ಧಾರ್ಮಿಕ ತಾಣಗಳಿಂದ ಮನಸಿಗೆ ನೆಮ್ಮದಿ

ಕೋಲಾರ: ತಾಲೂಕಿನ ಲಕ್ಷ್ಮೀಸಾಗರ ಗ್ರಾಮದ ಚಾಮುಂಡೇಶ್ವರಿ ದೇವಾಲಯದಲ್ಲಿ ದೇವಿ ಜನ್ಮ ದಿನಾಚರಣೆ ಮತ್ತು ದೇವಾಲಯದ 31ನೇ ವಾರ್ಷಿಕೋತ್ಸವವನ್ನು ಕೋಡಿ ಮಠ ಸ್ವಾಮೀಜಿ ಸಾರಥ್ಯದಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಗಳು ಲೋಕಕಲ್ಯಾಣಾರ್ಥವಾಗಿ ರೋಗ ರುಜನ ದೂರವಾಗಲು ಹಾಗೂ ನಾಡಿನ ಜನತೆಯ ಸುಖಸಮೃದ್ಧಿಗಾಗಿ ಚಾಮುಂಡೇಶ್ವರಿ ಮಹಾಯಾಗ ನಡೆದಿದ್ದು ಎಲ್ಲರಿಗೂ ದೇವಿ ಸನ್ಮಂಗಳವನ್ನುಂಟು ಮಾಡಲಿ ಎಂದು ಆಶಿಸಿದರು. ಶಾಸಕ ಕೊತ್ತೂರು ಮಂಜುನಾಥ್ ಮಾತನಾಡಿ, ಧಾರ್ಮಿಕ ತಾಣಗಳಿಂದ ಜನರ ಮನಸಿಗೆ ನೆಮ್ಮದಿ ಬರುತ್ತದೆ. ಇತ್ತೀಚೆಗೆ ಜನತೆ ಧಾರ್ಮಿಕ ಪರಂಪರೆಯನ್ನು ಸ್ವಲ್ಪ ಮಟ್ಟಿಗೆ ಮರೆಯುತ್ತಿದ್ದು ೯ಗಾಗಿ ಇನ್ನಾದರೂ ಎಚ್ಚೆತ್ತುಕೊಂಡು



ಕೋಲಾರದ ಲಕ್ಷ್ಮೀಸಾಗರ ಚಾಮುಂಡೇಶ್ವರಿ ದೇವಾಲಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕೋಡಿ ಮಠ ಶ್ರೀಗಳು ಭಾಗವಹಿಸಿದ್ದರು.

ಪೂಜಾ ಪರಂಪರೆಯನ್ನು ಮುಂದುವರೆಸಬೇಕೆಂದು ಶ್ರೀಗಳು ಸೂಚಿಸಿದರು. ನಾಗಲಾಪುರ ಮಠದ ಶ್ರೀಗಳು ಮಾತನಾಡಿ, ಡಿದರು. ಎಂಎಲ್‌ಸಿ ಅನಿಲ್ ಕುಮಾರ್ ಮಾತನಾಡಿದರು. ಚೌಡೇಶ್ವರಿ ದೇಗುಲದ ಧರ್ಮದರ್ಶಿ ಚಂದ್ರಣ್ಣ, ಶ್ರೀನಿವಾಸ್, ಸಿ.ಆರ್.ಅಶೋಕ್, ಸಿ.ಜಿ.ಮುರಳಿ ಇದ್ದರು.

ಬಿದರೆ ಗ್ರಾಪಂ ಅಧ್ಯಕ್ಷರ ಆಯ್ಕೆ

ಗುಬ್ಬಿ: ತಾಲ್ಲೂಕಿನ ಚೇಳೂರು ಹೋಬಳಿ ಬಿದರೆ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಗುಡ್ಡದಹಳ್ಳಿ ರೇಣುಕಮ್ಮ ರಾಮಕೃಷ್ಣಯ್ಯ ಅವಿರೋಧ ಆಯ್ಕೆಯಾದರು. ಚುನಾವಣಾಧಿಕಾರಿಯಾಗಿ ತಾಪಂ ಇಒ ಶಿವಪ್ರಕಾಶ್ ಚುನಾವಣೆ ನಡೆಸಿಕೊಟ್ಟರು. ಏಕೈಕ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದ ರೇಣುಕಮ್ಮ ಅವರನ್ನು ಅವಿರೋಧ ಆಯ್ಕೆ ಘೋಷಣೆ ಮಾಡಲಾಯಿತು.

ನೂತನ ಅಧ್ಯಕ್ಷೆ ರೇಣುಕಮ್ಮ ಮಾತನಾಡಿ, ಬಿದರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಿಗೂ ಮೂಲಭೂತ ಸವಲತ್ತುಗಳಾದ ನೀರು, ರಸ್ತೆ, ಚರಂಡಿ, ವಿದ್ಯುತ್ ವ್ಯವಸ್ಥೆಗೆ ಮೊದಲ ಆದ್ಯತೆ ನೀಡಿ ಎಲ್ಲಾ ಸದಸ್ಯರ ವಿಶ್ವಾಸ ಪಡೆದು ಕೆಲಸ ಮಾಡುತ್ತೇನೆ. ಶಾಸಕ ವಾಸಣ್ಣ ಅವರ ಮಾರ್ಗದರ್ಶನದಲ್ಲಿ ಸರಕಾರಿ ಸೌಲಭ್ಯ ಪಂಚಾಯಿತಿಗೆ ತರಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು. ನೂತನ ಅಧ್ಯಕ್ಷರ ಬೆಂಬಲಿಗರು ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು. ಗ್ರಾಪಂ ಉಪಾಧ್ಯಕ್ಷೆ ಸುಶೀಲ, ಸದಸ್ಯರಾದ ಸತೀಶ್ ಶಿವಲಿಂಗಯ್ಯ, ಮೈಲಾರಯ್ಯ, ಪಾಂಡುರಂಗಯ್ಯ, ಕೃಷ್ಣಪ್ಪ, ಉಮೇಶ್, ಶಶಿಕಲಾ, ನೇತ್ರಾವತಿ, ಗೀತಾ, ಶಿವಣ್ಣ, ಉಮೇಶ್, ಮುಖಂಡರಾದ ಶಿವಾಜಿರಾವ್, ಕೃಷ್ಣೋಜಿರಾವ್, ಪಿಡಿಒ ಅಶೋಕ್ ಬಸವನಾಳ್ ಇತರರು ಇದ್ದರು.

ವಿರಾಮ
ಪ್ರತಿ ಭಾನುವಾರ

ಬೇಕಾಗಿದ್ದಾರೆ
ಮೈಸೂರಿನ ಖಾಸಗಿ ಕಂಪನಿಗೆ,
Fortuner ಮತ್ತು Automatic
ಕಾರು ಓಡಿಸುವ ಡ್ರೈವರ್ಸ್‌ಗಳು ಬೇಕಾಗಿದ್ದಾರೆ.
ಸಂಬಳ: 25,000
ಮತ್ತು ಟೆಲಿಕಾಲಿಂಗ್ ಕಛೇರಿಯ ಕೆಲಸ
ಮಾಡಲು ಹುಡುಗಿಯರು ಬೇಕಾಗಿದ್ದಾರೆ.
8548089469/ 9164946160

ಮುಸ್ಲಿಮರೇ ಇಲ್ಲದ ಊರಲ್ಲಿ ಮೊಹರಂ ಆಚರಣೆ !

ಜಲಾಲ್‌ಬಾಷಾ, ಐ.ಡಿ.ಹಳ್ಳಿ, ಮಧುಗಿರಿ

ತಾಲೂಕಿನ ಮಿಡಿಗೇಶಿ ಹೋಬಳಿಯ ಆಂಧ್ರಗಡಿಗೆ ಹೊಂದಿಕೊಂಡಿರುವ ಬ್ರಹ್ಮದೇವರಹಳ್ಳಿ ಗ್ರಾಮದಲ್ಲಿ ಸುಮಾರು ವರ್ಷಗಳಿಂದ ಅದ್ದೂರಿಯಾಗಿ ಮೊಹರಂ ಆಚರಿಸುತ್ತಾ ಬಂದಿದ್ದಾರೆ. ಈ ವರ್ಷವೂ ಕೂಡ ಇಡೀ ಊರು ಸಿಂಗರಿಸಿ ಗ್ರಾಮೀಣ ಭಾಗದಲ್ಲಿ ಮೊಹರಂ ಆಚರಿಸಿದ್ದಾರೆ.

ತುಮಕೂರು ಜಿಲ್ಲೆಯ ಬ್ರಹ್ಮದೇವರಹಳ್ಳಿ ಗ್ರಾಮದಲ್ಲಿ ಕೇವಲ ಹಿಂದೂ ಸಮುದಾಯದ ಸಮಾಜದವರು ವಾಸಿಸುತ್ತಿದ್ದು, ಒಂದು ಕುಟುಂಬವೂ ಮುಸ್ಲಿಂ ಸಮುದಾಯದವರು ಇಲ್ಲ. ಆದರೂ ಪಕ್ಕದೂರಿನ ಮುಸ್ಲಿಂ ಸಮುದಾಯದವರನ್ನು ಕರೆಸಿ ಈ ಗ್ರಾಮದಲ್ಲಿ ಶ್ರದ್ಧಾ ಭಕ್ತಿಯಿಂದ ಆಚರಿಸುತ್ತಿದ್ದಾರೆ.

ಮೊಹರಂ ಇತಿಹಾಸ: ಪ್ರವಾದಿ ಮಹಮದ್ ಪೈಗಂಬರರ ಮೊಮ್ಮಕ್ಕಳಾದ ಹಸೇನ್ ಹಾಗೂ ಹುಸೇನ್ ಅವರ ಸಂಗಡಿಗರು ಯಜೀದನೆಂಬವನ ಜೊತೆ ಕರ್ಬಲಾ ಮೈದಾನದಲ್ಲಿ ಲಡಾಯಿ(ಯುದ್ಧ) ಮಾಡುವಾಗ ಜೀವ ಬಿಟ್ಟರು. ಇದರ ಶೋಕಾಚರಣೆಯ ಭಾಗವಾಗಿ ಮೊಹರಂ ಆಚರಣೆ ಅಂದಿನಿಂದ ಶುರುವಾಯಿತು. ಇಂತಹ ಇತಿಹಾಸದ ಹಿನ್ನೆಲೆಯೊಂದಿಗೆ ಪ್ರಾರಂಭವಾದ ಈ ಮೊಹರಂ ಈಗ ಜಾತಿ ಧರ್ಮ ಲಿಂಗ ಭೇದ ಗಡಿ ಮೀರಿ ಜಾತ್ಯತೀತವಾಗಿ ಸರ್ವಧರ್ಮಗಳ ಜನರು ಸೇರಿ ಆಚರಿಸುತ್ತಿದ್ದಾರೆ.

ಮೊದಲನೇ ದಿನ ಗುದ್ದಲಿ ಪೂಜೆ, ನೆರವೇರಿಸಿ ಐದನೇ ದಿನದವರೆಗೂ ಪ್ರತಿ ರಾತ್ರಿ ತಮಟೆ ಹೊಡೆಯುತ್ತಾ, ಕುಣಿದು ಐದನೇ ದಿನ ಕೆಂಡ ತುಳಿಯುವ ಕಾರ್ಯಕ್ರಮ ಇರುತ್ತೆ. ರಾತ್ರಿ ಇಡೀ ಕುಣಿದು ಕುಪ್ಪಳಿಸಿ ಬೆಳಗಿನ ಜಾವದಲ್ಲಿ ಕೆಂಡ ತುಳಿದ ನಂತರ ಬಾಬಯ್ಯ ಮೂರ್ತಿಗಳನ್ನು ಊರಿನಲ್ಲಿ ಮೆರವಣಿಗೆ ಮಾಡಿ ವಿಸರ್ಜನೆ ಮಾಡಲಾಯಿತು. ಧಾರ್ಮಿಕ ಆಚರಣೆಯಾಗಿ ರೂಪುಗೊಂಡಿದ್ದ ಮೊಹರಂ ಈಗ ಸಾಂಸ್ಕೃತಿಕ ಆಚರಣೆಯಾಗಿ ರೂಪುಗೊಂಡು ಊರ ಹಬ್ಬದ ರೀತಿ ಊರಿನ ಜನರೆಲ್ಲ ಸೇರಿ ಹಬ್ಬದ ರೀತಿ ಸಂಭ್ರಮಿಸುತ್ತಿದ್ದಾರೆ. ಈ ಮೊಹರಂ ಹಬ್ಬವನ್ನು ಹಿಂದೂ - ಮುಸ್ಲಿಂ ಭಾವೈಕ್ಯತೆಯ ರೂಪಕವಾಗಿ ಒಂದೊಂದು ಭಾಗದಲ್ಲಿ ಒಂದೊಂದು ರೀತಿ ಆಚರಿಸುತ್ತಾರೆ.

ಬ್ರಹ್ಮದೇವರಹಳ್ಳಿ ಗ್ರಾಮದಲ್ಲಿ ಹಿಂದೂ ಮುಸ್ಲಿಂ ಭಾವೈಕ್ಯತೆಯ ಮೊಹರಂ.

> **ಪ್ರಸ್ತುತ ಕಾಲದಲ್ಲಿ ಧರ್ಮದ ಹೆಸರಿನಲ್ಲಿ ಯುದ್ಧ ನಡೆಸುವ ದೇಶಗಳು ನಮ್ಮೂರಿನಂತಹ ಹಳ್ಳಿಗಳ ಭಾವೈಕ್ಯತೆ ನೋಡಿ ಕಲಿಯಬೇಕು. ಧರ್ಮ ಧರ್ಮಗಳ ನಡುವೆ ಸಂಘರ್ಷದ ಕಿಡಿ ಹತ್ತಿಸೋ ಕಿಡಿಗೇಡಿಗಳು ಒಮ್ಮೆ ಇಂತಹ ಹಳ್ಳಿಗಳ ಸಂಭ್ರಮ ಕಾಣಬೇಕು. ನಾವು ಸರ್ವಧರ್ಮಗಳ ಆಚಾರ ವಿಚಾರ ಸಂಸ್ಕೃತಿ ಆಚರಣೆ ಗೌರವಿಸಬೇಕು. ಇಂತಹ ಹಳ್ಳಿಗಳಲ್ಲಿನ ಸೌಹಾರ್ದತೆ ನೋಡಿ ಅರಿಯಬೇಕು.**
> -ಬ್ರಹ್ಮದೇವರಹಳ್ಳಿ ಹರೀಶ್, ಮಾಜಿ ಗ್ರಾಪಂ ಸದಸ್ಯ

ಸೈಬರ್ ವಂಚಕರ ಕಾಟ: ಬೆಸ್ಕಾಂ ನೌಕರ ಆತ್ಮಹತ್ಯೆ

ರಾಮನಗರ: ಡಿಜಿಟಲ್ ಅರೆಸ್ಟ್ ಎಂಬ ಸೈಬರ್ ವಂಚನೆಯ ಜಾಲಕ್ಕೆ ಸಿಲುಕಿದ ವ್ಯಕ್ತಿಯೊಬ್ಬ ವಂಚಕರ ಕಾಟ ತಡೆಯಲಾರದೇ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ತಾಲೂಕಿನ ಕೆಲಗೆರೆ ಗ್ರಾಮದಲ್ಲಿ ನಡೆದಿದೆ.

ಗ್ರಾಮದ ಕೆ.ಕುಮಾರ್ ಸೈಬರ್ ವಂಚಕರ ಜಾಲಕ್ಕೆ ಸಿಲುಕಿ ಆತ್ಮಹತ್ಯೆಗೆ ಶರಣಾಗಿರುವ ನತದೃಷ್ಟ. ತನಗಾದ ವಂಚನೆಯ ಬಗ್ಗೆ ಡೆತ್ ನೋಟ್ ಬರೆದಿಟ್ಟು ಮೃತ ಕುಮಾರ್ ಗ್ರಾಮದ ತಮ್ಮ ಮನೆಯಲ್ಲಿ ನೇಣಿಗೆ ಶರಣಾಗಿದ್ದಾರೆ. ಈ ಸಂಬಂಧ ಎಂ.ಕೆ.ದೊಡ್ಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಮೃತರ ಮರಣೋತ್ತರ ಪರೀಕ್ಷೆ ನಡೆಸಿ, ಕುಟುಂಬಸ್ಥರಿಗೆ ಹಸ್ತಾಂತರಿಸಲಾಗಿದೆ. ಮಂಗಳವಾರ ಗ್ರಾಮದಲ್ಲಿ ಮೃತರ ಅಂತ್ಯಕ್ರಿಯೆ ನಡೆಸಲಾಗಿದೆ.

ಏನಿದು ವಂಚನೆ!!

ಗ್ರಾಮದ ಕಾಡೇಗೌಡ ಎಂಬುವವರ ಪುತ್ರನಾದ ಕೆ.ಕುಮಾರ್ ವಿವಾಹಿತನಾಗಿದ್ದು, ಬೆಸ್ಕಾಂನಲ್ಲಿ ಹೊರಗುತ್ತಿಗೆ ಆಧಾರದಲ್ಲಿ ಸೇವೆ ಸಲ್ಲಿಸುತ್ತಾ, ಪತ್ನಿ ಹಾಗೂ ಒಂದು ಗಂಡುಮಗುವಿನ ಜೊತೆ ಬೆಂಗಳೂರಿನ ಎಚ್.ಎಸ್.ಆರ್.ಲೇಔಟ್ ನಲ್ಲಿ ವಾಸವಾಗಿದ್ದರು. ಈತ ತನಗಾದ ವಂಚನೆಯ ಬಗ್ಗೆ ಡೆತ್ ನೋಟ್ ನಲ್ಲಿ ಉಲ್ಲೇಖಿಸಿದ್ದಾರೆ. ವಿಕ್ರಮ್ ಗೋಸ್ವಾಮಿ ಹೆಸರಿನ ವ್ಯಕ್ತಿ ತಾನು ಸಿಬಿಐ ಅಧಿಕಾರಿ ಎಂದು ನನಗೆ ಕರೆಮಾಡಿ, ನಿನ್ನ ಮೇಲೆ ಅರೆಸ್ಟ್ ವಾರೆಂಟ್ ಬಂದಿದೆ ಎಂದು ಹೆದರಿಸಿದ. ನಿನ್ನನ್ನು ಪ್ರಕರಣವೊಂದರಲ್ಲಿ ಬಂಧಿಸುತ್ತೇನೆ ಎಂಬ ಬೆದರಿಕೆ ಹಾಕಿದ. ತದನಂತರ, ಸಹಾಯ ಮಾಡುವುದಾಗಿ ಹೇಳಿ ನನ್ನಿಂದ ಮೊದಲಿಗೆ 1.95 ಲಕ್ಷ ಹಣ ಹಾಕಿಸಿಕೊಂಡ. ಬಳಿಕ ಇದನ್ನೆ ಮುಂದುವರೆಸಿ ವಿವಿಧ ಬ್ಯಾಂಕ್ ಖಾತೆಗಳಿಗೆ ನನ್ನಿಂದ ಸುಮಾರು 11 ಲಕ್ಷವರೆಗೂ ಹಣ ಹಾಕಿಸಿದ. ಇಷ್ಟಕ್ಕೆ ಸುಮ್ಮನಾಗದ ಮತ್ತೆ 2.75 ಲಕ್ಷ ಹಣ ಹಾಕುವಂತೆ ಪೀಡಿಸುತ್ತಿದ್ದಾನೆ. ಈ ವಿಚಾರವಾಗಿ ಸಾಕಷ್ಟು ಹಿಂಸೆ ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ನಾನು ನನ್ನ ಸಾವನ್ನು ನಾನೇ ತಂದುಕೊಳ್ಳುತ್ತಿದ್ದೇನೆ. ಪೊಲೀಸ್ ಇಲಾಖೆ ಇಂತಹ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿ, ವಂಚಕರ ಎಡೆಮುರಿ ಕಟ್ಟಬೇಕಿದೆ ಎಂದು ಕುಮಾರ್ ಡೆತ್ ನೋಟ್ ನಲ್ಲಿ ಉಲ್ಲೇಖಿಸಿದ್ದಾರೆ.

ಹೃದಯ ಸಂಬಂಧಿ ಕಾಯಿಲೆ ಬಗ್ಗೆ ಅರಿವಿಲ್ಲದೆ ಮರಣ

ತುಮಕೂರು: ಗ್ರಾಮೀಣ ಪ್ರದೇಶದ ಸಾಮಾನ್ಯ ಜನರಿಗೆ ಹೃದಯ ಸಂಬಂಧಿತ ಕಾಯಿಲೆಗಳ ಬಗ್ಗೆ ಅರಿವಿಲ್ಲದೆ ಸಾವನ್ನಪ್ಪುತ್ತಿದ್ದಾರೆ ಎಂದು ಸಿದ್ಧಾರ್ಥ ವೈದ್ಯಕೀಯ ಕಾಲೇಜು ಆಸ್ಪತ್ರೆ ಕಾಡಿಯಾಕ್ ಸೆಂಟರ್ ಖ್ಯಾತ ಹೃದ್ರೋಗ ತಜ್ಞ ಡಾ. ತಮಿಮ್ ಅಹಮದ್ ಅವರು ಅಭಿಪ್ರಾಯ ಪಟ್ಟರು.

ನಗರದ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಕ್ಯಾಂಪಸ್‌ನ ಡಾ. ಜಿ.ಪಿ ನೆಕ್ಸಸ್ ಸಭಾಂಗಣದಲ್ಲಿ ನಿನ್ನೆ ಇಂಟರ್ನಲ್ ಕ್ವಾಲಿಟಿ ಅಶುರೆನ್ಸ್ ಸೆಲ್ ಏರ್ಪಡಿಸಲಾಗಿದ್ದ ಡಾ. ಹೆಚ್.ಎಂ ಗಂಗಾಧಾರಯ್ಯ ಸ್ಮರಣಾರ್ಥ ಉಪನ್ಯಾಸ ಮಾಲಿಕೆಯಲ್ಲಿ ಸಾಮಾನ್ಯ ಹೃದಯ ರೋಗಗಳ ಚಿಕಿತ್ಸೆ ಮತ್ತು ಜಾಗೃತಿ ಕಾರ್ಯಕ್ರಮದಲ್ಲಿ ಡಾ.ತಮೀಮ್ ಅಹಮ್ಮದ್ ಮಾತನಾಡಿದರು.

ಸಾಮಾನ್ಯ ಜನರು ಹೃದಯ ರೋಗ ಸಂಬಂಧಿಸಿದ ಕಾಯಿಲೆಗಳಿಗೆ ಚಿಕಿತ್ಸೆ ಪಡೆಯಲು ಪರದಾಡುತ್ತಿರುತ್ತಾರೆ. ಇಂತಹ ಸಂದಿಗ್ಧ ಸ್ಥಿತಿಯಲ್ಲಿ ಅವರಿಗೆ ಸಹಾಯ ಮಾಡಬೇಕೆಂಬುದು ಸಿದ್ಧಾರ್ಥ ವೈದ್ಯಕೀಯ ಆಸ್ಪತ್ರೆಯ ಹೆಬ್ಬಯಕೆಯಾಗಿದ್ದು ಜನ ಸಾಮನ್ಯರಿಗೆ ಸಿದ್ಧಾರ್ಥ ಕಾಡಿಯಾಕ್ ಸೆಂಟರ್ ಧನ್ವಂತರಿ ಚಿಕಿತ್ಸೆಯಾಗಿ ಪರಿಣಮಿಸಿದೆ. ಮನುಷ್ಯ ಇಂದು ಬದಲಾಗುತ್ತಿರುವ ಆಧುನಿಕ ಜೀವನ ಶೈಲಿಗೆ ಒಗ್ಗಿ ಕೊಳ್ಳುತ್ತಿದ್ದು ಸಣ್ಣ ಸಣ್ಣ ವಯಸ್ಸಿನ ಮಕ್ಕಳಿಗೂ, ವಯಸ್ಕರಿಗೆ ಹೃದಯ ಸಂಬಂಧಿತ ಕಾಯಿಲೆಗಳು ಕಾಡುತ್ತಿವೆ. ಹಾರ್ಟ್ ಅಟ್ಯಾಕ್ ಬರುವ ಮುನ್ನ ಅನೇಕ ಮುನ್ಸೂಚನೆ ಕಾಣಬರುತ್ತವೆ. ಇದರಿಂದ ಎಚ್ಚರಿಕೆ ವಹಿಸಿ ವೈದ್ಯರ ಭೇಟಿ ಮಾಡಿ ಚಿಕಿತ್ಸೆ ಪಡೆಯಲು ಕಿವಿ ಮಾತು ಹೇಳಿದರು.



ಈ ಸಂದರ್ಭದಲ್ಲಿ ಪ್ರಾಂಶುಪಾಲರಾದ ಡಾ ರವಿಪ್ರಕಾಶ್, ಡೀನ್ ಡಾ ರೇಣುಕಾಲತಾ, ಕಾಲೇಜಿನ ಆಂತರಿಕ ಗುಣಮಟ್ಟ ಕೋಶದ ಡಾ. ರವಿರಾಮ್, ಡಾ.ರವಿಕಿರಣ್ ಉಪಸ್ಥಿತರಿದ್ದರು.

ವಿಶ್ವವಾಣಿ
ಕುಟುಂಬದ ಸದಸ್ಯರಾಗಲು ಬಯಸುತ್ತೀರಾ
ಇಲ್ಲಿದೆ ಅವಕಾಶ



ಮುಖ್ಯ ಉಪಸಂಪಾದಕ
- ದಿನಪತ್ರಿಕೆಯಲ್ಲಿ 8-10 ವರ್ಷಗಳ ಅನುಭವ. ಎಲ್ಲ ವಿಭಾಗಗಳ ಪರಿಣತಿ.
- ಉತ್ತಮ ಭಾಷಾಂತರ ಜ್ಞಾನ, ನವಮಾಧ್ಯಮದ ಕಲಿಕಾಸಕ್ತಿ

ಹಿರಿಯ ಉಪ ಸಂಪಾದಕ
- ದಿನಪತ್ರಿಕೆಯಲ್ಲಿ 5-7 ವರ್ಷಗಳ ಅನುಭವ. ಎಲ್ಲ ವಿಭಾಗಗಳ ಪರಿಣತಿ.
- ಪ್ರಚಲಿತ ವಿದ್ಯಮಾನಗಳ ಜ್ಞಾನ, ಉತ್ತಮ ಭಾಷಾ ಪ್ರೌಢಿಮೆ, ವಿನ್ಯಾಸ ಕೌಶಲ್ಯ.

ಉಪ ಸಂಪಾದಕ
- ದಿನಪತ್ರಿಕೆಯಲ್ಲಿ 2-3 ವರ್ಷಗಳ ಸುದ್ದಿ ಮನೆ ಅನುಭವ.
- ಪ್ರಚಲಿತ ವಿದ್ಯಮಾನಗಳ ಜ್ಞಾನ, ಭಾಷಾ ಪ್ರೌಢಿಮೆ, ಪುಟ ವಿನ್ಯಾಸ ಪರಿಣತಿ.

ಆಸಕ್ತರು, ಜುಲೈ 22ರೊಳಗಾಗಿ ಕೆಳಗೆ ಸೂಚಿಸಿದ ಸಂಪರ್ಕ ಸಂಖ್ಯೆಗೆ ವಾಟ್ಸ್ ಆ್ಯಪ್ ಅಥವಾ ಇಮೇಲ್‌ಗೆ ಅರ್ಜಿಯನ್ನು ಕಳಿಸಬಹುದು

ವಿಶ್ವವಾಣಿ
hr@vishwavani.news
63623 93988

ಫೈನಾನ್ಸ್ ಕಿರುಕುಳ: ಚಾಲಕ ಆತ್ಮಹತ್ಯೆ

ಹಗರಿಬೊಮ್ಮನಹಳ್ಳಿ: ಖಾಸಗಿ ಫೈನಾನ್ಸ್ ಕಂಪನಿಯ ವ್ಯವಸ್ಥಾಪಕ ಮತ್ತು ಸಿಬ್ಬಂದಿಯ ಕಿರುಕುಳದಿಂದ ಬೇಸತ್ತು ತಾಲೂಕಿನ ಬನ್ನಿಕಲ್ಲು ಗ್ರಾಮದ ಸರಕುಸಾಗಣೆ ವಾಹನ ಚಾಲಕ ಅಂಬೇಶ್ (36) ಎಂಬುವರು ಮರದ ಕೊಂಬೆಗೆ ನೇಣು ಹಾಕಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮೂರು ವರ್ಷದ ಹಿಂದೆ ಸಾಲ ಪಡೆದಿದ್ದ ಅಂಬೇಶ್, ಕಳೆದ 3 ತಿಂಗಳಿನಿಂದ ದುಡಿಮೆ ಇಲ್ಲದ ಕಾರಣ ತಿಂಗಳ ಕಂತು 14,301 ಕಟ್ಟಲು ಸಾಧ್ಯವಾಗಿರಲಿಲ್ಲ. ಅದಕ್ಕೆ ಮೂರು ದಿನಗಳಿಂದ ಅವರ ಮನೆ ಬಳಿ ಬಂದ ಚೋಳಾ ಫೈನಾನ್ಸ್ ಕಂಪನಿಯ ಸಿಬ್ಬಂದಿ ಅವಾಚ್ಯ ಪದಗಳಿಂದ ನಿಂದಿಸಿದ್ದರು' ಎಂದು ಅಂಬೇಶ್ ಪತ್ನಿ ಕೆ.ಮಂಜುಳಾ ದೂರು ನೀಡಿದ್ದಾರೆ. ಫೈನಾನ್ಸ್ ವ್ಯವಸ್ಥಾಪಕ ಮತ್ತು ಸಿಬ್ಬಂದಿ ನಾಗಲಾಪುರ ತಾಂಡಾದ ನವೀನ್ ಎಂಬುವರ ವಿರುದ್ಧ ಪ್ರಕರಣ ದಾಖಲಾಗಿದೆ' ಎಂದು ತಂಬ್ರಹಳ್ಳಿ ಠಾಣೆ ಪೊಲೀಸರು ತಿಳಿಸಿದ್ದಾರೆ.

ಕಾಡಾನೆ ದಾಳಿ: ವ್ಯಕ್ತಿ ಸಾವು

ಮಂಗಳೂರು: ಬೆಳ್ತಂಗಡಿ ತಾಲೂಕಿನ ಕೊಕ್ಕಡ ಗ್ರಾಮದ ಸೌತಡ್ಕ ಗುಂಡಿಯಲ್ಲಿ ಕಾಡಾನೆ ದಾಳಿಗೆ ಒಬ್ಬರು ಮೃತಪಟ್ಟಿದ್ದಾರೆ. ಸೌತಡ್ಕ ನಿವಾಸಿ ಬಾಲಕೃಷ್ಣ (60) ಮೃತರು. ಗುರುವಾರ ಬೆಳಗ್ಗೆ 11 ಗಂಟೆ ಸುಮಾರಿಗೆ ಕಾಡಾನೆಗಳ ಹಿಂಡು ಬಂದಿದ್ದು, ಸ್ಥಳೀಯರು ಓಡಿಸುವ ವೇಳೆ ಆನೆ ದಾಳಿ ನಡೆಸಿದೆ ಎಂದು ಮೂಲಗಳು ತಿಳಿಸಿವೆ. ಮೃತದೇಹವನ್ನು ಬೆಳ್ತಂಗಡಿ ಸರಕಾರಿ ಆಸ್ಪತ್ರೆಗೆ ಕೊಂಡೊಯ್ಯಲಾಗಿದ್ದು, ಘಟನಾ ಸ್ಥಳಕ್ಕೆ ಧರ್ಮಸ್ಥಳ ಠಾಣೆ ಪೊಲೀಸರು, ಅರಣ್ಯಾಧಿಕಾರಿಗಳು ಹಾಗೂ ಸ್ಥಳೀಯ ಗ್ರಾಮ ಪಂಚಾಯಿತಿ ಅಧಿಕಾರಿಗಳು ಭೇಟಿ ನೀಡಿದ್ದಾರೆ. ಮುಂದಿನ ಕಾನೂನುಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸರು ತಿಳಿಸಿದ್ದಾರೆ.

ಜೋಕಾಲಿ ಸುತ್ತಿ ಬಾಲಕಿ ಸಾವು

ಭಟ್ಕಳ: ಜೋಕಾಲಿಯಲ್ಲಿ ಆಟ ಆಡುತ್ತಿರುವಾಗ ಜೋಕಾಲಿಯ ಹಗ್ಗ ಕುತ್ತಿಗೆಗೆ ಸುತ್ತಿಕೊಂಡ ಪರಿಣಾಮ ಉಸಿರುಗಟ್ಟಿ ಬಾಲಕಿಯೊಬ್ಬಳು ಮೃತಪಟ್ಟಿರುವ ದಾರುಣ ಘಟನೆ ತಾಲೂಕಿನ ತೆರ್ನಮಕ್ಕಿ ಸಭಾತಿಯಲ್ಲಿ ಗುರುವಾರ ನಡೆದಿದೆ. ಪ್ರಣೀತ ಜಗನ್ನಾಥ ನಾಯ್ಕ (13) ಮೃತ ಬಾಲಕಿ. ಈಕೆ 7ನೇ ತರಗತಿಯಲ್ಲಿ ಓದುತ್ತಿದ್ದಳು. ಮಳೆಯ ಪ್ರಯುಕ್ತ ಗುರುವಾರ ಶಾಲೆಗೆ ರಜೆಯಿದ್ದ ಕಾರಣ ಬಾಲಕಿ ತನ್ನ ಸಹೋದರಿಯೊಂದಿಗೆ ವೇಲ್ (ಶಾಲು) ನಿಂದ ಜೋಕಾಲಿ ಮಾಡಿಕೊಂಡು ಆಟವಾಡುತ್ತಿದ್ದಳು. ಈ ವೇಳೆ ಅಕಸ್ಮಾತಾಗಿ ಜೋಕಾಲಿಯ ಹಗ್ಗ ಕುತ್ತಿಗೆಗೆ ಸುತ್ತಿಕೊಂಡಿದೆ. ಇದರಿಂದಾಗಿ ಬಾಲಕಿಗೆ ಉಸಿರುಗಟ್ಟಿದ್ದು, ಅದರಿಂದ ತಪ್ಪಿಸಿಕೊಳ್ಳಲಾಗದೇ ಪ್ರಾಣ ಬಿಟ್ಟಿದ್ದಾಳೆ. ಘಟನೆ ಸಂದರ್ಭದಲ್ಲಿ ತಾಯಿಯು ಕೂಡಾ ಕೆಲಸಕ್ಕೆ ಹೋಗಿದ್ದರಿಂದ ಅಪಾಯದಿಂದ ತಪ್ಪಿಸಲು ಸಾಧ್ಯವಾಗಿಲ್ಲ ಎನ್ನಲಾಗಿದೆ.

ಬೆಳೆ ನಾಶ: ಫಾರೆಸ್ಟ್ ವಾಚರ್ ಮೇಲೆ ಹಲ್ಲೆ

ದಾವಣಗೆರೆ: ಕಾಡು ಹಂದಿಗಳು ಜಮೀನಿಗೆ ನುಗ್ಗಿ ಬೆಳೆ ನಾಶ ಮಾಡಿದ್ದಕ್ಕೆ ಆಕ್ರೋಶಗೊಂಡ ರೈತರು ಅರಣ್ಯ ಇಲಾಖೆ ಸಿಬ್ಬಂದಿ ಮೇಲೆ ಮಾರಣಾಂತಿಕವಾಗಿ ಹಲ್ಲೆ ಮಾಡಿದ ಘಟನೆ ಜಗಳೂರು ತಾಲೂಕಿನ ರಂಗಯ್ಯನದುರ್ಗದಲ್ಲಿ ನಡೆದಿದೆ.

ಅರಣ್ಯದ ಅಂಚಿನಲ್ಲಿರುವ ಗೋಡೆ ಗ್ರಾಮದ ಜಮೀನಿನಲ್ಲಿ ಕಾಡು ಹಂದಿಗಳು ಬೆಳೆ ಹಾನಿ ಮಾಡಿವೆ. ಇದರಿಂದ ಸಿಟ್ಟಿಗೆದ್ದ ಗ್ರಾಮದ ರಂಗಪ್ಪ ಮತ್ತು ಆತನ ಪುತ್ರ ಬಸವರಾಜ್ ಸೇರಿ ಫಾರೆಸ್ಟ್ ವಾಚರ್ ತಿಪ್ಪೇಶ್ ಮೇಲೆ ಹೊಲದಲ್ಲಿ ಹಲ್ಲೆ ನಡೆಸಿದ್ದಾರೆ. ರಂಗಯ್ಯದುರ್ಗ ಅರಣ್ಯದ ಪ್ರದೇಶಕ್ಕೆ ಹೊಂದಿಕೊಂಡು ಈ ರೈತರ ಜಮೀನುಗಳಿವೆ. ಜಮೀನುಗಳಿಗೆ ಕಾಡು ಹಂದಿ ಸೇರಿದಂತೆ ಹಲವು ಕಾಡು ಪ್ರಾಣಿಗಳು ನುಗ್ಗಿ ಬೆಳೆ ನಾಶ ಮಾಡುತ್ತಿದ್ದವು. ಇದರಿಂದ ಅಕ್ರೋಶಗೊಂಡ ರೈತ ರಂಗಪ್ಪ ಹಾಗೂ ಆತನ ಮಗ ಬಸವರಾಜ್ ಫಾರೆಸ್ಟ್ ವಾಚರ್ ತಿಪ್ಪೇಶ್‌ಗೆ ಅವಾಚ್ಯವಾಗಿ ನಿಂದಿಸಿ, ಕಲ್ಲಿನಿಂದ ಹಲ್ಲೆ ನಡೆಸಿದ್ದಾರೆ. ಅಲ್ಲದೇ ಕೊಲೆಗೆ ಯತ್ನಿಸಿದ್ದಾರೆ ಎಂಬ ಆರೋಪ ಕೇಳಿಬಂದಿದೆ. ಈ ವೇಳೆ ಸ್ಥಳೀಯರು ಆಗಮಿಸಿ ತಿಪ್ಪೇಶ್ ಅವರನ್ನು ರಕ್ಷಣೆ ಮಾಡಿದ್ದಾರೆ. ಅವರನ್ನು ಜಗಳೂರು ಆಸ್ಪತ್ರೆಗೆ ದಾಖಲಿಸಿದ್ದಾರೆ.

ನಮ್ಮ ಯೋಜನೆಗಳನ್ನೇ ನಕಲು ಮಾಡಿದ್ದಾರೆ

ಬೆಂಗಳೂರು: ಕೆಲ ತಿಂಗಳಲ್ಲಿ ಎದುರಾಗಲಿರುವ ವಿಧಾನಸಭಾ ಚುನಾವಣೆಯನ್ನು ಗಮನದಲ್ಲಿರಿಸಿಕೊಂಡು ಬಿಹಾರ ಸರಕಾರ ಘೋಷಿಸಿರುವ 'ಉಚಿತ ವಿದ್ಯುತ್' ಯೋಜನೆಯ ಕ್ರೆಡಿಟ್ ವಾರ್ ಜೋರಾಗಿದ್ದು, ರಾಜ್ಯ ಕಾಂಗ್ರೆಸ್ ನಾಯಕರು ಬಿಜೆಪಿಯವರ ಎಲ್ಲ ಯೋಜನೆಗಳು ಕಾಂಗ್ರೆಸ್‌ನ ಕಾಪಿ ಎಂದು ಟೀಕಿಸಿದ್ದಾರೆ.

ಈ ಬಗ್ಗೆ ಸುದ್ದಿಗಾರರೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದ್ದು, ನಮ್ಮ ಮಾದರಿಯನ್ನು ಇಡೀ ದೇಶ ಪಾಲಿಸುತ್ತಿದೆ. ಬಡವರ ಬದುಕಿಗಾಗಿ ನಾವು ಗೃಹಲಕ್ಷ್ಮಿ ಯೋಜನೆ ಜಾರಿ ಮಾಡಿದ್ದೇವೆ. ಕಾಂಗ್ರೆಸ್ ಸರಕಾರ ಬಡವರಿಗಾಗಿ ಜಮೀನು, ನಿವೇಶನ, ಪಿಂಚಣಿ, ಮಕ್ಕಳಿಗೆ ಬಿಸಿಯೂಟ ಸೇರಿದಂತೆ ಅನೇಕ ಕಾರ್ಯಕ್ರಮ ಕೊಟ್ಟಿದೆ. ಅದೇ ರೀತಿ ನಾವು ಗ್ಯಾರಂಟಿ ಯೋಜನೆ ನೀಡಿದೆವು. ನಮ್ಮ ಗ್ಯಾರಂಟಿ ಯೋಜನೆಗಳನ್ನು ಪ್ರಧಾನಮಂತ್ರಿಗಳು ಸೇರಿದಂತೆ ಬಿಜೆಪಿಯ ಎಲ್ಲಾ ನಾಯಕರು ಟೀಕೆ ಮಾಡಿದರು. ಕರ್ನಾಟಕದಲ್ಲಿ ಯೋಜನೆ ಜಾರಿಯಾದ ನಂತರ ಬಿಜೆಪಿಯವರೇ ಮಧ್ಯಪ್ರದೇಶ, ಮಹಾರಾಷ್ಟ್ರ, ದೆಹಲಿ, ಹರಿಯಾಣ ರಾಜ್ಯಗಳಲ್ಲಿ ಘೋಷಣೆ ಮಾಡಿದ್ದರು. ಈಗ ಬಿಹಾರದಲ್ಲಿ ಘೋಷಣೆ ಮಾಡಿದ್ದಾರೆ. ಕರ್ನಾಟಕ ಕಾಂಗ್ರೆಸ್ ಸರಕಾರ ಸದಾ ದೇಶಕ್ಕೆ ಮಾದರಿ. ಕಾಂಗ್ರೆಸ್ ಮಾದರಿಯನ್ನು ಇಡೀ ದೇಶವೇ ಪಾಲಿಸುತ್ತಿದೆ ಎಂದು ಅಭಿಪ್ರಾಯಪಟ್ಟರು.

ಕಾಪಿ ಮಾಡುವುದೇ ಬಿಜೆಪಿ ಕೆಲಸ: ಇದೇ ವಿಷಯಕ್ಕೆ ಸಂಬಂಧಿಸಿದಂತೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರತಿಕ್ರಿಯಿಸಿದ್ದು, ಬಿಜೆಪಿಯವರು ಮಾತನಾಡುವುದು ಒಂದು, ಮಾಡುವುದು ಮತ್ತೊಂದು. ಕರ್ನಾಟಕದ ಗ್ಯಾರಂಟಿ ಯೋಜನೆಗಳನ್ನು ಕಾಪಿ ಹೊಡೆದು ಪಾಸಾಗಿರುವ ಸ್ಟೂಡೆಂಟ್ಸ್ ಎಂದು ಟೀಕಿಸಿದರು.

ವಿರೋಧಿಸಿದವರೇ ಅನುಷ್ಠಾನ ಮಾಡುತ್ತಿದ್ದಾರೆ: ಕಾರ್ಮಿಕ ಸಚಿವ ಸಂತೋಷ ಲಾಡ್ ಮಾತನಾಡಿ, ಬಿಜೆಪಿ ಅಧಿಕಾರಕ್ಕೆ ಬರುವ ಮುನ್ನ ಆಧಾರ್ ಕಾರ್ಡ್, ನರೇಗಾ ಯೋಜನೆಗೆ ವಿರೋಧ ಮಾಡಿದ್ದರು. ಬಳಿಕ ಅದನ್ನೇ ಬಳಸಿಕೊಂಡು ಪ್ರಚಾರ ತೆಗೆದುಕೊಂಡರು. ನಮ್ಮ ಐದು ಗ್ಯಾರಂಟಿ ಯೋಜನೆಯ ಬಗ್ಗೆಯೂ ವಿರೋಧ ಮಾಡಿದರು. ಮಹಾರಾಷ್ಟ್ರ ಚುನಾವಣೆ, ಎಂಪಿ ಚುನಾವಣೆ, ಬಿಹಾರ ಚುನಾವಣೆಗಳಲ್ಲಿ ನಮ್ಮ ಯೋಜನೆಗಳನ್ನು ಕಾಪಿ ಮಾಡಿದ್ದಾರೆ ಎಂದು ಟೀಕಿಸಿದರು. ಬಿಹಾರ ಇವತ್ತು ಅಭಿವೃದ್ಧಿ ಹೊಂದದ ರಾಜ್ಯವಾಗಿದೆ. ಬಿಹಾರದಲ್ಲಿ ಅತಿ ಹೆಚ್ಚು ಅಪರಾಧ ನಡೆಯುವ ರಾಜ್ಯ ಆಗಿದೆ. ಕಡಿಮೆ ಜಿಡಿಪಿ, ಶಿಕ್ಷಣ ಇಲ್ಲ, ಕೈಗಾರಿಕೆ ಇಲ್ಲ. ಬಿಜೆಪಿ ಆಡಳಿತ ನಡೆಸುವ ರಾಜ್ಯಗಳಲ್ಲಿ ಆಡಳಿತ ಸರಿಯಿಲ್ಲ. ನಮ್ಮ ಜಿಡಿಪಿ ಸಹ ಅವರಿಗೆ ಹೋಗುತ್ತಿದೆ. ಇಷ್ಟು ಹಣ ಹೋಗಿದ್ರು, 15 ಮೇಲ್ಸೇತುವೆ ಬಿದ್ದಿವೆ. ಬಿಜೆಪಿ ಆಡಳಿತ ನಡೆಸುವ ರಾಜ್ಯಗಳು ದೊಡ್ಡ ಉದ್ದಾರ ಆಗಿಲ್ಲ ಎಂದು ಟೀಕಿಸಿದರು.

> ನಾವು ಕೊಟ್ಟ ಐದು ಗ್ಯಾರಂಟಿಗಳನ್ನು ಬಿಜೆಪಿ ಟೀಕಿಸುತ್ತಿತ್ತು. ಆದರೆ ತಾನು ಎಲ್ಲಾ ರಾಜ್ಯಗಳಲ್ಲೂ ಇದೇ ಮಾದರಿಯನ್ನು ನಕಲು ಮಾಡುತ್ತಿದೆ. ಈಗ ಚುನಾವಣೆಯ ಹತ್ತಿರವಿರುವ ಬಿಹಾರದಲ್ಲಿ ಬಿಜೆಪಿ-ಜೆಡಿಯು ಸಮ್ಮಿಶ್ರ ಸರಕಾರ ತಿಂಗಳಿಗೆ 125 ಯೂನಿಟ್ ಉಚಿತ ವಿದ್ಯುತ್ ಘೋಷಿಸಿದೆ. ಇದು ಬಿಜೆಪಿಯ ದ್ವಂದ್ವ ತೋರಿಸುತ್ತದೆ. ರಾಜ್ಯದಲ್ಲಿ ಮಹಿಳೆಯರ ನೆರವಿಗೆ ಗೃಹಲಕ್ಷ್ಮಿ ಯೋಜನೆಯನ್ನು ತಂದೆವು. ಬಿಜೆಪಿ ಇದನ್ನು ಟೀಕಿಸಿತು. ಆದರೆ ಮಹಾರಾಷ್ಟ್ರದಲ್ಲಿ ಅವರು ಅದನ್ನೇ ಮಾಡಿದ್ದಾರೆ.
>
> – ಎಂ.ಬಿ.ಪಾಟೀಲ್ ಕೈಗಾರಿಕಾ ಸಚಿವ

ಮಳೆ ಅಬ್ಬರ

← ಮೊದಲಪುಟದಿಂದ

ಬೆಂಗಳೂರು-ಮಂಗಳೂರು ಹೆದ್ದಾರಿ ಬಂದ್: ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಳೆ ಮುಂದುವರಿದ ಹಿನ್ನೆಲೆ ಕಡಬ ತಾಲೂಕಿನ ಮಣ್ಣಗುಂಡಿ ಬಳಿ ಭೂಕುಸಿತ ಉಂಟಾಗಿದ್ದು, ಬೆಂಗಳೂರು- ಮಂಗಳೂರು ರಾಷ್ಟ್ರೀಯ ಹೆದ್ದಾರಿ ಬಂದ್ ಆಗಿದೆ. ಬೆಂಗಳೂರಿನಿಂದ ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯಕ್ಕೆ ಸಂಚರಿಸಲು ಯಾವುದೇ ಅಡಚಣೆ ಇಲ್ಲ, ಧರ್ಮಸ್ಥಳ ಕ್ರಾಸ್‌ನಿಂದ ಸ್ವಲ್ಪ ಮುಂದೆ ಕುಸಿತ ಉಂಟಾಗಿದೆ. ನೆಲ್ಯಾಡಿ ಬಳಿ ಎಡಕ್ಕೆ ಹೋಗಿ ಕೊಕ್ಕಡ ಮಾರ್ಗವಾಗಿ ರಾ.ಹೆ.75 ತಲುಪ ಬಹುದು ಎಂದು ಎಸ್‌ಪಿ ಡಾ.ಅರುಣ್ ಮನವಿ ಮಾಡಿದ್ದಾರೆ.

ಭೂಕುಸಿತದ ಭೀತಿ: ಮಡಿಕೇರಿ ಸುತ್ತಲಿನ ಪ್ರದೇಶಗಳಲ್ಲಿ ಕಳೆದ 2-3 ದಿನಗಳಿಂದ ನಿರಂತರ ಮಳೆಯಾಗುತ್ತಿರುವುದರಿಂದ ಮೇಕೇರಿ ಗ್ರಾಮ, ನವಗ್ರಾಮ ಹಾಗೂ ಶಕ್ತಿ ನಗರದಲ್ಲಿ ಭೂಕುಸಿತದ ಆತಂಕವುಂಟಾಗಿದೆ. ಈ ವ್ಯಾಪ್ತಿಯ ಬೆಟ್ಟದ ತಪ್ಪಲಿನಲ್ಲಿರುವ ಸುಮಾರು 13 ಮನೆಗಳು ಅಪಾಯದ ಅಂಚಿನಲ್ಲಿದ್ದು, ಕೆಲ ಮನೆಗಳ ಹಿಂಭಾಗದ ನೆಲ ಬಿರುಕು ಬಿಟ್ಟಿದೆ. ಮುಂಜಾಗ್ರತಾ ಕ್ರಮವಾಗಿ ಇಲ್ಲಿನ ಕುಟುಂಬಗಳು ಸಂಬಂಧಿಕರ ಮನೆಯಲ್ಲಿ ಆಶ್ರಯ ಪಡೆದಿದ್ದಾರೆ.

ಪೊಲೀಸ್ ಅಧಿಕಾರಿಗಳ ಅಮಾನತು ವಾಪಸ್?

← ಮೊದಲಪುಟದಿಂದ

ಗೃಹ ಇಲಾಖೆಯು ನ್ಯಾಯಾಲಯಕ್ಕೆ ಸಲ್ಲಿಸಿದ ವರದಿಯಲ್ಲಿ ಪೊಲೀಸ್ ಇಲಾಖೆ ವೈಫಲ್ಯದ ಬಗ್ಗೆ ಎಲ್ಲಿಯೂ ಪ್ರಸ್ತಾಪ ಮಾಡಿಲ್ಲ. ಆದರೆ ಸಂಘಟಕರಾದ ಆರ್‌ಸಿಬಿ, ಡಿಎನ್‌ಎ ಮತ್ತು ಕೆಎಸ್‌ಸಿಎ ವಿಜಯೋತ್ಸವ ಆಚರಣೆಗೆ ಸಂಬಂಧಿಸಿದಂತೆ ನಿಯಮಾವಳಿ ಪ್ರಕಾರ ಪೊಲೀಸ್ ಇಲಾಖೆ ಅನುಮತಿ ಪಡೆದಿರಲಿಲ್ಲವೆಂದು ಸ್ಪಷ್ಟಪಡಿಸಲಾಗಿದೆ. ಜೂನ್ 3 ರಂದು ಸಂಜೆ 6.30ಕ್ಕೆ, ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ಆರ್‌ಸಿಬಿ ಸಂಭ್ರಮಾಚರಣೆ ಬಗ್ಗೆ ಮಾತ್ರ ಮಾಹಿತಿ ನೀಡಲಾಗಿತ್ತು. ಆದರೆ ಕಾರ್ಯಕ್ರಮಕ್ಕೆ ಅನುಮತಿ ಕೇಳಿರಲಿಲ್ಲ ಎನ್ನುವುದನ್ನು ತಿಳಿಸಲಾಗಿದೆ. ಮಾಹಿತಿಯ ಪತ್ರದಲ್ಲಿ ಕಾನೂನು ಪ್ರಕಾರ ಅಗತ್ಯ ಮಾಹಿತಿಯನ್ನು ಒದಗಿಸಿರಲಿಲ್ಲ. ಯಾವುದೇ ದೊಡ್ಡ ಪ್ರಮಾಣದ ಕಾರ್ಯಕ್ರಮ ಆಯೋಜನೆಗಿಂತ 7 ದಿನ ಮುಂಚೆ ಆಯೋಜಕರು ಅರ್ಜಿ ಸಲ್ಲಿಸಬೇಕಾಗುತ್ತದೆ. ಆದರೆ, ಈ ಪ್ರಕರಣದಲ್ಲಿ ಕೇವಲ ಒಂದು ದಿನ ಮುಂಚೆ ಮಾತ್ರ ಪೊಲೀಸರಿಗೆ ಮಾಹಿತಿ ರೂಪದಲ್ಲಿ ಪತ್ರ ನೀಡಲಾಗಿತ್ತು ಎಂದು ವರದಿಯಲ್ಲಿ ತಿಳಿಸಲಾಗಿದೆ.

ಅಣು ವಿದ್ಯುತ್‌ನತ್ತ ಚಿತ್ತ

← ಮೊದಲಪುಟದಿಂದ

ಪ್ರಸ್ತುತ 717 ಕ್ಯೂಸೆಕ್ ಸಾಮರ್ಥ್ಯವಿದ್ದು 1,21,197 ಎಕರೆ ಅಚ್ಚುಕಟ್ಟು ಪ್ರದೇಶಕ್ಕೆ ನೀರಾವರಿ ಸಾಮರ್ಥ್ಯ ಒದಗಿಸಲಾಗುತ್ತದೆ. ಹಾಲಿ ನಾಲೆ ತಿಪಟೂರು ತಾಲೂಕಿನಲ್ಲಿ 20.39 ಕಿ.ಮೀ. ಇದ್ದು, 4177 ಎಕರೆ ಅಚ್ಚುಕಟ್ಟು ಪ್ರದೇಶ, ತುರುವೇ ಕೆರೆ ತಾಲ್ಲೂಕಿನಲ್ಲಿ 25.01 ಕಿ.ಮೀ ಇದ್ದು, 60274 ಎಕರೆ ಅಚ್ಚುಕಟ್ಟು ಪ್ರದೇಶ ಹಾಗೂ ನಾಗಮಂಗಲ ತಾಲ್ಲೂಕಿನಲ್ಲಿ 30.56 ಕಿ.ಮೀ ಇದ್ದು, 56746 ಎಕರೆ ಅಚ್ಚುಕಟ್ಟು ಪ್ರದೇಶವಿದ್ದು ಹಾಗೂ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ನಾಲೆಯು 2.50 ಕಿ.ಮೀ. ಉದ್ದವಿದ್ದು, ಒಟ್ಟಾರೆ 78.46 ಕಿ.ಮೀ. ಇದ್ದು, 1,21,197 ಎಕರೆ ಅಚ್ಚುಕಟ್ಟು ಪ್ರದೇಶವನ್ನು ಹೊಂದಿದೆ.

ಜೈವಿಕವಾಗಿ ವಿಘಟನೆಯಾಗುವ ಕೈಚೀಲಕ್ಕೆ ಸಂಪುಟ ಸಮ್ಮತಿ

